RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ–V | ಬೆಂಗಳೂರು, ಗುರುವಾರ, ಆಗಸ್ಟ್ ೨೪, ೨೦೧೭ (ಭಾದ್ರಪದ ೦೨, ಶಕ ವರ್ಷ ೧೯೩೯) | ನಂ. ೮೩೧ |
|---|---|---|
| ***Part–V*** | ***Bengaluru, Thursday, August 24, 2017 (Bhadrapada 02, Shaka Varsha 1939)*** | ***No. 831*** |


**ಸಾರ್ವಜನಿಕ ಶಿಕ್ಷಣ ಇಲಾಖೆ,**

**ಆಯ್ಕೆ ಹಾಗೂ ನೇಮಕಾತಿ ಪ್ರಾಧಿಕಾರ ಮತ್ತು ಜಿಲ್ಲಾ ಉಪನಿರ್ದೇಶಕರು [ಆಡಳಿತ], ಸಾರ್ವಜನಿಕ ಶಿಕ್ಷಣ ಇಲಾಖೆ,**

**ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ**

**ಸಂಖ್ಯೆ :ಇ2/ಪಪ್ರಾಶಿನೇಮಕ/202/2017–18, ದಿನಾಂಕ: 24ನೇ ಆಗಸ್ಟ್ 2017**

## ನೇಮಕಾತಿ ಅಧಿಸೂಚನೆ

***ವಿಷಯ***: 2017–18ನೇ ಸಾಲಿನಲ್ಲಿ **ಪದವೀಧರ ಪ್ರಾಥಮಿಕ ಶಿಕ್ಷಕ** (6 ರಿಂದ 8 ತರಗತಿಗಳ) ವೃಂದದ ಹುದ್ದೆಗಳನ್ನು ನೇರ ನೇಮಕಾತಿಯಿಂದ ಜಿಲ್ಲಾ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಭರ್ತಿ ಮಾಡುವ ಬಗ್ಗೆ.

***ಉಲ್ಲೇಖ***:

1. ಸರ್ಕಾರದ ಆದೇಶ ಇಡಿ 626 ಪಿಬಿಎಸ್ 2014 ದಿನಾಂಕ: 19.05.2017.
2. ಸರ್ಕಾರದ ಅಧಿಸೂಚನೆ ಸಂ : ಇಡಿ 626 ಪಿಬಿಎಸ್ 2014 ದಿನಾಂಕ: 07.08.2017.
3. ಸರ್ಕಾರದ ಆದೇಶ ಸಂ. ಇಡಿ 503 ಪಿಬಿಎಸ್ 2016 ದಿನಾಂಕ: 22.08.2017
4. ಸರ್ಕಾರದ ಆದೇಶ ಇಡಿ 399 ಪಿಬಿಎಸ್ 2017 ದಿನಾಂಕ: 22.08.2017
5. ಸರ್ಕಾರದ ಆದೇಶ ಇಡಿ 399 ಪಿಬಿಎಸ್ 2017(1) ದಿನಾಂಕ: 22.08.2017
6. ಸರ್ಕಾರದ ಆದೇಶ ಇಡಿ 399 ಪಿಬಿಎಸ್ 2017(2) ದಿನಾಂಕ: 22.08.2017
7. ಸರ್ಕಾರದ ಆದೇಶ ಇಡಿ 399 ಪಿಬಿಎಸ್ 2017(3) ದಿನಾಂಕ: 22.08.2017
8. ಸರ್ಕಾರಿ ಆದೇಶ ಸಂ: ಸಿಆಸುಇ 08 ಸೆಹಿಮ 1995 ದಿನಾಂಕ: 20.06.1995.
9. ಸರ್ಕಾರಿ ಆದೇಶ ಸಂ: ಸಿಆಸುಇ 97 ಸೇನೆನಿ 2002 ದಿನಾಂಕ: 22.11.2002.
10. ಸರ್ಕಾರಿ ಆದೇಶ ಸಂ:ಸಿಆಸುಇ 53 ಸೇನೇನಿ 2007 ದಿನಾಂಕ: 04.01.2008.
11. ಸರ್ಕಾರಿ ಆದೇಶ ಸಂ: ಸಿಆಸುಇ 50 ಎಸ್ಆರ್ಆರ್ 2007 ದಿನಾಂಕ: 26.07.2011.
12. ಸರ್ಕಾರಿ ಆದೇಶ ಸಂ : ಸಿಆಸುಇ 54 ಎಸ್ಆರ್ಆರ್ 2012 ದಿನಾಂಕ: 04.08.2012.
13. ಸರ್ಕಾರಿ ಆದೇಶ ಸಂ: ಮಮಇ 176 ಪಿಹೆಚ್‌ಪಿ 2010, ದಿನಾಂಕ: 21.12.2012.
14. ಸರ್ಕಾರಿ ಆದೇಶ ಸಂ: ಇಡಿ 238 ಪಿಟಿಐ 2012 ದಿನಾಂಕ: 21.01.2013.
15. ಸರ್ಕಾರಿ ಆದೇಶ ಸಂ: ಸಿಆಸುಇ 43 ಹೆಚ್‌ಕೆಸಿ 2013 ದಿನಾಂಕ: 29.01.2014.

ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8 ತರಗತಿಗಳ) ವೃಂದದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟದ ಪರೀಕ್ಷೆ ಮೂಲಕ ಅಂದರೆ ದಿ ಕರ್ನಾಟಕ ಎಜುಕೇಷನ್ ಡಿಪಾರ್ಟ್‌ಮೆಂಟ್ ಸರ್ವೀಸಸ್ [ಡಿಪಾರ್ಟ್‌ಮೆಂಟ್ ಆಫ್ ಪಬ್ಲಿಕ್ ಇನ್‌ಸ್ಟ್ರಕ್ಷನ್] [ರೆಕ್ರೂಟ್‌ಮೆಂಟ್][ಅಮೆಂಡ್‌ಮೆಂಟ್] ರೂಲ್ಸ್–2017 ಸಂಖ್ಯೆ: ಇಡಿ 626 ಪಿಬಿಎಸ್ 2014, ದಿನಾಂಕ: 07.08.2017ರ ನಿಯಮಗಳನ್ವಯ ಆಯ್ಕೆ ಮಾಡಲು ಈ ನೇಮಕಾತಿ ಅಧಿಸೂಚನೆ ಹೊರಡಿಸಿದೆ. ನೇಮಕಾತಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನ ಅಂದರೆ ದಿನಾಂಕ: 25–9–2017 ಕ್ಕೆ ಅರ್ಹರಾಗಿರುವ ಅಭ್ಯರ್ಥಿಗಳಿಂದ ನಿಗದಿಪಡಿಸಿರುವ ಅರ್ಜಿ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಕರೆಯಲಾಗಿದೆ. ಇತರೆ ಬೇರೆ ಯಾವುದೇ ನಮೂನೆಯಲ್ಲಿ ಸಲ್ಲಿಸುವ ಅರ್ಜಿಗಳನ್ನು ನೇಮಕಾತಿಗಾಗಿ ಪರಿಗಣಿಸಲಾಗುವುದಿಲ್ಲ.

ಆಯ್ಕೆ ಮಾಡಲು ಉಲ್ಲೇಖದಲ್ಲಿ ನಮೂದಿಸಿರುವ ನೇಮಕಾತಿ ನಿಯಮಗಳು, ಮೀಸಲಾತಿ ನಿಯಮಗಳು ಹಾಗೂ ಕಾಲಕಾಲಕ್ಕೆ ಹೊರಡಿಸಲಾದ ಸರ್ಕಾರದ ಆದೇಶಗಳ ಪ್ರಕಾರ ಇರುವ ಪ್ರಚಲಿತ ನಿಯಮಗಳನ್ನು ಅನುಸರಿಸಿ ಆಯ್ಕೆ ಮಾಡಲು ಪ್ರಕಟಣೆಯನ್ನು ಸಾರ್ವಜನಿಕರ ತಿಳುವಳಿಕೆಗಾಗಿ ನೀಡಲಾಗಿದೆ.

**ಟಿಪ್ಪಣಿ:** 1) ಈ ಅಧಿಸೂಚನೆಯು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ನಿಯಮಗಳು, ಆದೇಶಗಳು ಮತ್ತು ತಿದ್ದುಪಡಿಗಳಿಗೆ ಒಳಪಟ್ಟಿರುತ್ತದೆ.

2) ಈಗ ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

***01] ಆಯ್ಕೆಗೆ ಅರ್ಹತೆ:***

ಆಯ್ಕೆಗೆ ಅರ್ಹತೆ ಪಡೆಯಲು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಗಳು

1. ಸರ್ಕಾರದ ಆದೇಶ ಸಂಖ್ಯೆ : ಇಡಿ 626 ಪಿಬಿಎಸ್ 2014 ಬೆಂಗಳೂರು ದಿನಾಂಕ: 07.08.2017 ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆ ಹಾಗೂ ವಯೋಮಿತಿಯನ್ನು ಹೊಂದಿರತಕ್ಕದ್ದು.
2. ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ (ಕೆ.ಟಿ.ಇ.ಟಿ/ಸಿ.ಟಿ.ಇ.ಟಿ–ಪೇಪರ್–2) ಅರ್ಹತೆ ಗಳಿಸಿರಬೇಕು.
3. ಜಿಲ್ಲಾ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕಡ್ಡಾಯವಾಗಿ ತೆಗೆದುಕೊಳ್ಳಬೇಕು.ಸ್ಪರ್ಧಾತ್ಮಕ ಪರೀಕ್ಷೆಯ ಪೇಪರ್–2ರಲ್ಲಿ ಕನಿಷ್ಟ ಶೇ. 50 ರಷ್ಟು ಅಂಕಗಳನ್ನು ಪಡೆಯಬೇಕು.
4. ಸ್ಪರ್ಧಾತ್ಮಕ ಪರೀಕ್ಷೆಯ ಬೋಧನಾ ಭಾಷಾ ಸಾಮರ್ಥ್ಯ ಪರೀಕ್ಷೆಯಲ್ಲಿ (ಪೇಪರ್–3) ಕನಿಷ್ಟ ಶೇ 60 ರಷ್ಟು ಅಂಕಗಳನ್ನು ಪಡೆಯಬೇಕು.
5. ಅಭ್ಯರ್ಥಿಗಳು ಆಧಾರ್ ನೋಂದಣಿ ಸಂಖ್ಯೆಯನ್ನು ಹೊಂದಿರತಕ್ಕದ್ದು. ಹೊಂದಿಲ್ಲದಿದ್ದಲ್ಲಿ ಆಧಾರ್‌ಗೆ ನೋಂದಾಯಿಸಿ ಇಐಡಿ ಸಂಖ್ಯೆಯನ್ನು ಹೊಂದಿರತಕ್ಕದ್ದು

***02] ನಿಗದಿತ ಅರ್ಜಿ ನಮೂನೆ ಸಲ್ಲಿಸುವ ವಿಧಾನ:***

ಅಭ್ಯರ್ಥಿಯು ಆನ್‌ಲೈನ್ [ON-LINE] ಮೂಲಕ ಇಲಾಖೆಯ ಅಧಿಕೃತ ವೆಬ್‌ಸೈಟ್ [http://schooleducation.kar.nic.in] ಮುಖಾಂತರ ಅರ್ಜಿ ಸಲ್ಲಿಸಬೇಕು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ನಂತರ [After submission of application] ದೊರೆಯುವ ಗಣಕೀಕೃತ ಅರ್ಜಿ ಸಂಖ್ಯೆಯನ್ನು ಪಡೆದುಕೊಳ್ಳುವುದು ಮತ್ತು ಸದರಿ ಸಂಖ್ಯೆಯನ್ನು ಕಡ್ಡಾಯವಾಗಿ ಬರೆದಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಸಂಖ್ಯೆಯು ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

ಆನ್ ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಚಲನ್‌ನ ಮುದ್ರಿತ ಪ್ರತಿಯನ್ನು ತೆಗೆದುಕೊಳ್ಳತಕ್ಕದ್ದು. ಮುದ್ರಿತ ಚಲನ್ ಪ್ರತಿಯನ್ನು ಆಧರಿಸಿ ಪರೀಕ್ಷಾ ಶುಲ್ಕವನ್ನು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದಾದರೂ ಶಾಖೆಯಲ್ಲಿ ಪಾವತಿಸಬಹುದು. ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಹಾಗೂ ಸದರಿ ಶುಲ್ಕವನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಈ ಕೆಳಕಂಡಂತೆ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಕೊನೆಯ ದಿನಾಂಕದೊಳಗೆ ಆನ್‌ಲೈನ್ ಮೂಲಕವೇ ಪಾವತಿಸುವುದು. ಕೇಂದ್ರೀಕೃತ ದಾಖಲಾತಿ ಘಟಕದ ಖಾತೆಗೆ ಶುಲ್ಕವು ಜಮೆ ಆಗಿರುವ ಬಗ್ಗೆ ಆನ್‌ಲೈನ್ ಸಂದೇಶವನ್ನು ತಮ್ಮ ಲಾಗಿನ್‌ನಲ್ಲಿ ಗಮನಿಸಿ, ಖಾತ್ರಿಪಡಿಸಿಕೊಂಡ ನಂತರ ಅಭ್ಯರ್ಥಿಯು ಮೂಲ ಅರ್ಜಿಯನ್ನು ಮುದ್ರಿಸಿಟ್ಟುಕೊಳ್ಳಬೇಕು.

ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವಾಗ ಅಭ್ಯರ್ಥಿಗೆ ನೀಡಿರುವ ನೋಂದಣಿ ಸಂಖ್ಯೆ ನಮೂದಿಸಿ ಸ್ಪರ್ಧಾತ್ಮಕ ಪರೀಕ್ಷೆಯ ಪ್ರವೇಶಪತ್ರವನ್ನು ಮೇಲೆ ನಮೂದಿಸಿರುವ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು. ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ನಿಗದಿಪಡಿಸಿದ ಅವಧಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

ಅರ್ಜಿಯನ್ನು submit ಮಾಡುವ ಮುನ್ನ ಭರ್ತಿಮಾಡಿರುವ ಎಲ್ಲಾ ಮಾಹಿತಿಗಳು ಸರಿಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿದಲ್ಲಿ ಕೊನೆಯದಾಗಿ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ನಿಗದಿಪಡಿಸಿದ ದಿನಾಂಕದ ನಂತರ ಪಾವತಿಸಿದ ಅರ್ಜಿ ಶುಲ್ಕವನ್ನು ಪರಿಗಣಿಸಲಾಗುವುದಿಲ್ಲ ಮತ್ತು ಸ್ವೀಕರಿಸಲಾಗುವುದಿಲ್ಲ. ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಭರ್ತಿ ಮಾಡಬೇಕಾಗಿದ್ದು, ಈ ಬಗ್ಗೆ ಮಾರ್ಗಸೂಚಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಯು ಎರಡು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ, ಆ ಎರಡೂ ಹುದ್ದೆಗಳಿಗೆ ಯಾವುದಕ್ಕೆ ಪ್ರಥಮ ಹಾಗೂ ದ್ವಿತೀಯ ಆದ್ಯತೆ ಬಯಸುವರು ಎಂಬುದನ್ನು ಕಡ್ಡಾಯವಾಗಿ ನಮೂದಿಸಬೇಕು. ಈ ಅಧಿಸೂಚನೆಗೆ ಅನುಸಾರವಾಗಿ ಸಲ್ಲಿಸಿದ ಅರ್ಜಿಯನ್ನು ಇಲಾಖೆಯು ನಡೆಸುವ ಇತರೆ ಅಧಿಸೂಚನೆಗಳ ಆಯ್ಕೆ ಪರೀಕ್ಷೆಗಳಿಗೆ ಪರಿಗಣಿಸಲಾಗುವುದಿಲ್ಲ

***03] ಅರ್ಜಿ ಸಲ್ಲಿಸಲು ಪಾವತಿಸಬೇಕಾದ ಶುಲ್ಕ:***

| ಕ್ರ ಸಂ | ವಿವರ | ಒಂದು ಹುದ್ದೆಗೆ ಅರ್ಜಿ ಸಲ್ಲಿಸಿದಲ್ಲಿ ರೂ.ಗಳಲ್ಲಿ | ಎರಡು ಹುದ್ದೆಗೆ ಅರ್ಜಿ ಸಲ್ಲಿಸಿದಲ್ಲಿ ರೂ.ಗಳಲ್ಲಿ |
|---|---|---|---|
| *01* | ಪರಿಶಿಷ್ಠ ಜಾತಿ / ಪರಿಶಿಷ್ಠ ವರ್ಗ / ಪ್ರವರ್ಗ-1 / ಅಂಗವಿಕಲ ಅಭ್ಯರ್ಥಿಗಳಿಗೆ | *500* | *1000* |
| *02* | ಇತರೆ ಎಲ್ಲಾ ಅಭ್ಯರ್ಥಿಗಳಿಗೆ | *1000* | *2000* |

ಅರ್ಜಿ ಒಂದೇ ಆದರೂ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸುವವರು ಪರೀಕ್ಷಾ ಶುಲ್ಕವನ್ನು ಮೇಲ್ಕಾಣಿಸಿದ ತಃಖ್ತೆಯಲ್ಲಿರುವಂತೆ ಕಟ್ಟಬೇಕು.

***04] ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:*** 25-09-2017

***05] ವಿವಿಧ ವಿಷಯ ಹಾಗೂ ಮಾಧ್ಯಮದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಬಗ್ಗೆ:***

ಎಲ್ಲಾ ವಿಷಯ ಹಾಗೂ ಮಾಧ್ಯಮದ ಹುದ್ದೆಗಳಿಗೆ ಒಂದೇ ಅರ್ಜಿ ನಮೂನೆಯನ್ನು ನಿಗದಿಪಡಿಸಿದೆ. ಅಭ್ಯರ್ಥಿಗಳು ಅರ್ಹರಿದ್ದಲ್ಲಿ ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ವಿಷಯದ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರತ್ಯೇಕ ಅರ್ಜಿಗಳ ಅವಶ್ಯಕತೆ ಇರುವುದಿಲ್ಲ. ಆದರೆ, ಹುದ್ದೆಗಳಿಗೆ ತಮ್ಮ ಆದ್ಯತೆಯನ್ನು ನಮೂದಿಸಬೇಕು. ಪೇಪರ್-2ರ ಪ್ರಶ್ನೆಪತ್ರಿಕೆಗೆ ಉತ್ತರವನ್ನು ಅಭ್ಯರ್ಥಿಯು ಆಯ್ಕೆ ಬಯಸುವ ವಿಷಯದ ಮಾಧ್ಯಮದಲ್ಲಿ ಅಥವ ಇಂಗ್ಲಿಷ್ ಭಾಷೆಯಲ್ಲಿ ಉತ್ತರಿಸಬಹುದಾಗಿದ್ದು ಸದರಿ ಪತ್ರಿಕೆ-2ನ್ನು ಯಾವ ಮಾಧ್ಯಮದಲ್ಲಿ ಉತ್ತರಿಸಲಾಗುವುದು ಎಂಬುದನ್ನು ಅರ್ಜಿಯಲ್ಲಿ ನಮೂದಿಸಬೇಕು.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 6-8ನೇ ತರಗತಿಗಳಿಗೆ ಬೋಧಿಸಲು ಅರ್ಜಿ ಸಲ್ಲಿಸುವ ಅಭ್ಯರ್ಥಿಯು, ಪೇಪರ್-2 ಪತ್ರಿಕೆಯನ್ನು, ಯಾವ ಬೋಧನಾ ಮಾಧ್ಯಮದ ಹುದ್ದೆಗೆ ಆಯ್ಕೆ ಬಯಸುತ್ತಾರೋ, ಆ ಭಾಷಾ ಮಾಧ್ಯಮದಲ್ಲಿ ಅಥವಾ ಆಂಗ್ಲ ಭಾಷೆಯಲ್ಲಿ ಉತ್ತರಿಸಬೇಕು.

**06] ಭರ್ತಿಮಾಡಲು ಉದ್ದೇಶಿಸಿದ ಹುದ್ದೆಗಳ ವಿವರ:**

**ಜಿಲ್ಲೆಯ ಹೆಸರು: ಚಿಕ್ಕೋಡಿ**

| **ಅಧಿಸೂಚಿತ ಹುದ್ದೆಗಳು** | | |
|---|---|---|
| ಭಾಷೆ- ಆಂಗ್ಲ ವಿಷಯದ ಹುದ್ದೆಗಳು | 321 | |
| | ಗಣಿತ & ವಿಜ್ಞಾನ ವಿಷಯ | ಸಮಾಜ ಪಾಠಗಳು ವಿಷಯ |
| ಕನ್ನಡ ಮಾಧ್ಯಮ ಹುದ್ದೆಗಳು | 293 | 73 |
| ಉರ್ದು ಮಾಧ್ಯಮ ಹುದ್ದೆಗಳು | 18 | 24 |
| ಒಟ್ಟು | 311 | 97 |
| **ಒಟ್ಟು ಹುದ್ದೆಗಳು** | **729** | |

ಪದವೀಧರ ಪ್ರಾಥಮಿಕ ಶಿಕ್ಷಕ ವೃಂದದ ವಿಷಯಗಳ ಹಾಗೂ ವಿವಿಧ ಮಾಧ್ಯಮದ ಹುದ್ದೆಗಳ ಸಂಖ್ಯೆ ಮತ್ತು ಮೀಸಲಾತಿ ವರ್ಗೀಕರಣದ ವಿವರಗಳನ್ನು ಈ ಅಧಿಸೂಚನೆಗೆ ಲಗತ್ತಿಸಿರುವ ***ಅನುಬಂಧ-1 ರಲ್ಲಿ*** ಪ್ರತ್ಯೇಕವಾಗಿ ನೀಡಲಾಗಿದೆ.

***07] ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8 ನೇ ತರಗತಿ)*** ಹುದ್ದೆಗಳಿಗೆ ಸಂಬಂಧಿಸಿದಂತೆ

***ವೇತನ ಶ್ರೇಣಿ:- ರೂ. 14550 - 26700***

(ರೂ. 14550-350-15600-400-17200-450-19000-500-21000-600-24600-700-26700)

**08] *ಶೈಕ್ಷಣಿಕ ವಿದ್ಯಾರ್ಹತೆ :-***

ಪ್ರತಿ ವಿಷಯ ಹಾಗೂ ಮಾಧ್ಯಮದ ಹುದ್ದೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಉಲ್ಲೇಖ(2)ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಗೊಳಿಸಲಾಗಿರುವ ವಿದ್ಯಾರ್ಹತೆ ಹೊಂದಿರಬೇಕು.

ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8) ವೃಂದದ ಹುದ್ದೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ಅರ್ಹತೆಗಳು:

1. ಪದವಿಯಲ್ಲಿ ಕನಿಷ್ಟ ಶೇ.50 ಅಂಕಗಳೊಂದಿಗೆ ಉತ್ತೀರ್ಣ ಮತ್ತು ಪ್ರಾಥಮಿಕ ಶಿಕ್ಷಣದಲ್ಲಿ ಎರಡು ವರ್ಷಗಳ ಡಿಪ್ಲೋಮ ಉತ್ತೀರ್ಣರಾಗಿರಬೇಕು

**ಅಥವಾ**

ಪದವಿಯಲ್ಲಿ ಕನಿಷ್ಟ ಶೇ.50 ಅಂಕಗಳೊಂದಿಗೆ ಉತ್ತೀರ್ಣ ಮತ್ತು ಬಿ.ಇಡಿ ಪದವಿ ಅಥವಾ ವಿಶೇಷ ಶಿಕ್ಷಣ (ಸ್ಪೆಷಲ್ ಎಜುಕೇಶನ್) ಪದವಿ ಪಡೆದಿರಬೇಕು.

**ಅಥವಾ**

ಪಿ.ಯು.ಸಿ.ಯಲ್ಲಿ ಕನಿಷ್ಟ ಶೇ.50 ಅಂಕಗಳೊಂದಿಗೆ ಉತ್ತೀರ್ಣ ಮತ್ತು ನಾಲ್ಕು ವರ್ಷದ ಬ್ಯಾಚುಲರ್ ಆಫ್ ಎಲಿಮೆಂಟರಿ ಎಜುಕೇಷನ್‌ನಲ್ಲಿ ಪದವಿ ಅಥವಾ ನಾಲ್ಕು ವರ್ಷಗಳ ಬ್ಯಾಚುಲರ್ ಆಫ್ ಎಜುಕೇಷನ್‌ನಲ್ಲಿ ಉತ್ತೀರ್ಣರಾಗಿರಬೇಕು.

ಪರಂತು ಪರಿಶಿಷ್ಟಜಾತಿ/ ಪರಿಶಿಷ್ಟ ವರ್ಗ/ ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ-1 / ವಿಕಲಚೇತನರು ಕನಿಷ್ಟ ಶೇಕಡ 45 ಅಂಕಗಳನ್ನು ಪದವಿ ಅಥವಾ ಪಿ.ಯು.ಸಿ.ಯಲ್ಲಿ ಪಡೆದಿರಬೇಕು.

**ಮತ್ತು**

2. ಕಾಲ ಕಾಲಕ್ಕೆ ಎನ್.ಸಿ.ಟಿ.ಇ.ಯು ನಿಗದಿಪಡಿಸಿದ ಯಾವುದಾದರೂ ಉನ್ನತ ಅಥವಾ ಹೆಚ್ಚುವರಿ ವಿದ್ಯಾರ್ಹತೆಯನ್ನು ಹೊಂದಿರಬೇಕು.

**ಮತ್ತು**

3. ಮೇಲ್ಕಾಣಿಸಿದ ವಿದ್ಯಾರ್ಹತೆಯೊಂದಿಗೆ ಅಭ್ಯರ್ಥಿಗಳು ಕರ್ನಾಟಕ ಅಥವಾ ಭಾರತ ಸರ್ಕಾರ ನಡೆಸುವ ಶಿಕ್ಷಕರ ಅರ್ಹತಾ ಪರೀಕ್ಷೆಯ ಪೇಪರ್-2 ರಲ್ಲಿ ಅರ್ಹತೆ ಗಳಿಸಿರಬೇಕು.

**ಟಿಪ್ಪಣಿ** : ಮೇಲ್ಕಾಣಿಸಿದ ವಿದ್ಯಾರ್ಹತೆಗಳಿಗೆ ಸಂಬಂಧಿಸಿದಂತೆ:

i. ನಾಲ್ಕು ವರ್ಷಗಳ ಸಂಯುಕ್ತ ಶಿಕ್ಷಕರ ಶಿಕ್ಷಣ ಪದವಿಯನ್ನು ಹೊಂದಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಐಚ್ಛಿಕ ವಿಷಯಗಳನ್ನು 3 ವರ್ಷವೂ ಕಡ್ಡಾಯವಾಗಿ ಅಧ್ಯಯನ ಮಾಡಿರಬೇಕೆಂಬ ಷರತ್ತು ಅನ್ವಯಿಸುವುದಿಲ್ಲ.

ii. "ಪ್ರಾಥಮಿಕ ಶಿಕ್ಷಣದಲ್ಲಿ ಡಿಪ್ಲೋಮಾ ಅಥವಾ ಪದವಿ ಕೋರ್ಸ್" ಅಥವಾ "ಬಿ. ಇಡಿ ಕೋರ್ಸ್" ಪಡೆದಿದ್ದಲ್ಲಿ ಎನ್.ಸಿ.ಟಿ.ಇಯಿಂದ ಮಾನ್ಯತೆ ಪಡೆದಿರಬೇಕು.

iii. ವಿಶೇಷ ಶಿಕ್ಷಣ (ಸ್ಪೆಷಲ್ ಎಜುಕೇಶನ್) ಪದವಿ ಪಡೆದಿದ್ದಲ್ಲಿ ರಿಹ್ಯಾಬಿಲಿಟೇಶನ್ ಕೌನ್ಸಿಲ್ ಆಫ್ ಇಂಡಿಯಾದಿಂದ ಮಾನ್ಯತೆ ಪಡೆದಿರಬೇಕು.

4. **ವಿದ್ಯಾರ್ಹತೆ : ಪ್ರತಿ ವಿಷಯ ಹಾಗೂ ಮಾಧ್ಯಮದ ಹುದ್ದೆಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ವಿದ್ಯಾರ್ಹತೆ ವಿವರಗಳು ಕೆಳಗಿನಂತೆ ಇರುತ್ತವೆ.**

I. **ಪದವೀಧರ ಪ್ರಾಥಮಿಕ ಶಿಕ್ಷಕ [ಭಾಷೆ – ಆಂಗ್ಲ] :**

**ಪದವೀಧರ ಪ್ರಾಥಮಿಕ ಶಿಕ್ಷಕ (ಭಾಷೆ- ಆಂಗ್ಲ) ಹುದ್ದೆಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು:**

(1) ಪದವಿಯಲ್ಲಿ ಆಂಗ್ಲ ಭಾಷೆಯನ್ನು ಐಚ್ಛಿಕ ವಿಷಯವಾಗಿ ಮೂರು ವರ್ಷವೂ ಅಧ್ಯಯನ ಮಾಡಿರಬೇಕು **ಮತ್ತು** ಕನ್ನಡ, ಹಿಂದಿ, ಮರಾಠಿ, ಉರ್ದು, ತೆಲುಗು, ತಮಿಳು, ಕೊಂಕಣಿ, ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ ಮತ್ತು ಭೂಗೋಳಶಾಸ್ತ್ರ ಈ ಯಾವುದಾದರೂ ವಿಷಯಗಳ ಪೈಕಿ ಒಂದು ವಿಷಯವನ್ನು ಮೂರು ವರ್ಷವೂ ಐಚ್ಛಿಕ ವಿಷಯವಾಗಿ ಅಧ್ಯಯನ ಮಾಡಿರಬೇಕು.

(2) ಐಚ್ಛಿಕ ಆಂಗ್ಲಭಾಷೆಯಲ್ಲಿ ಕನಿಷ್ಟ ಶೇಕಡ 50ರಷ್ಟು ಅಂಕಗಳನ್ನು ಮತ್ತು ಮೇಲ್ಕಾಣಿಸಿದ ಇತರೆ ವಿಷಯಗಳ ಪೈಕಿ ಒಂದು ವಿಷಯದಲ್ಲಿ ಕನಿಷ್ಟ ಶೇಕಡ 50ರಷ್ಟು ಅಂಕಗಳನ್ನು ಗಳಿಸಿರಬೇಕು.

ಪರಂತು ಪರಿಶಿಷ್ಟಜಾತಿ /ಪರಿಶಿಷ್ಟ ವರ್ಗ/ ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ-1 / ವಿಕಲಚೇತನರಿಗೆ, ನಿಗದಿಪಡಿಸಿರುವ ಎರಡು ವಿಷಯಗಳಲ್ಲಿ ಕನಿಷ್ಟ ಶೇಕಡ 45 ಅಂಕಗಳನ್ನು ಪಡೆದಿರಬೇಕು.

(3) ಶಿಕ್ಷಣದಲ್ಲಿ ಡಿಪ್ಲೋಮಾ ಅಥವಾ ಪದವಿ ಹಂತಗಳಲ್ಲಿ ಆಂಗ್ಲಭಾಷೆಯನ್ನು ಬೋಧನಾ ವಿಷಯವಾಗಿ (ಮೆಥಡಾಲಜಿ) ಅಭ್ಯಾಸ ಮಾಡಿರಬೇಕು.

***II.*** **ಪದವೀಧರ ಪ್ರಾಥಮಿಕ ಶಿಕ್ಷಕ [ಗಣಿತ ಮತ್ತು ವಿಜ್ಞಾನ] :**

**ಪದವೀಧರ ಪ್ರಾಥಮಿಕ ಶಿಕ್ಷಕ (ಗಣಿತ ಮತ್ತು ವಿಜ್ಞಾನ) ಹುದ್ದೆಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು:**

(1) ಪದವಿಯಲ್ಲಿ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರ ವಿಷಯಗಳನ್ನು ಐಚ್ಛಿಕ ವಿಷಯಗಳಾಗಿ ಮೂರು ವರ್ಷವೂ ಅಧ್ಯಯನ ಮಾಡಿರಬೇಕು. ಹಾಗು ಪ್ರತಿ ವಿಷಯದಲ್ಲಿಯೂ ಕನಿಷ್ಟ ಶೇ. 50 ರಷ್ಟು ಅಂಕಗಳನ್ನು ಪಡೆದಿರಬೇಕು.

ಪರಂತು ಪರಿಶಿಷ್ಟಜಾತಿ/ ಪರಿಶಿಷ್ಟ ವರ್ಗ/ ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ-1/ ವಿಕಲಚೇತನರಿಗೆ, ನಿಗದಿಪಡಿಸಿರುವ ಮೂರೂ ವಿಷಯಗಳಲ್ಲಿ ಕನಿಷ್ಟ ಶೇಕಡ 45 ಅಂಕಗಳನ್ನು ಪಡೆದಿರಬೇಕು.

(2) ಶಿಕ್ಷಣದಲ್ಲಿ, ಡಿಪ್ಲೋಮಾ ಅಥವಾ ಪದವಿ ಹಂತಗಳಲ್ಲಿ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರ ವಿಷಯಗಳ ಪೈಕಿ ಯಾವುದಾದರೊಂದು ವಿಷಯವನ್ನು ಬೋಧನಾ ವಿಷಯವಾಗಿ (ಮೆಥಡಾಲಜಿ) ಅಭ್ಯಾಸ ಮಾಡಿರಬೇಕು.

**III. ಪದವೀಧರ ಪ್ರಾಥಮಿಕ ಶಿಕ್ಷಕ [ಸಮಾಜ ಪಾಠಗಳು] :**

**ಪದವೀಧರ ಪ್ರಾಥಮಿಕ ಶಿಕ್ಷಕ (ಸಮಾಜ ಪಾಠಗಳು) ಹುದ್ದೆಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು:**

(1) ಪದವಿಯಲ್ಲಿ ಇತಿಹಾಸ/ ಅರ್ಥಶಾಸ್ತ್ರ/ ಭೂಗೋಳಶಾಸ್ತ್ರ/ ರಾಜ್ಯಶಾಸ್ತ್ರ ವಿಷಯಗಳ ಪೈಕಿ ಎರಡು ವಿಷಯಗಳನ್ನು ಐಚ್ಛಿಕ ವಿಷಯಗಳಾಗಿ ಮೂರು ವರ್ಷವೂ ಅಧ್ಯಯನ ಮಾಡಿರಬೇಕು. ಸದರಿ ಎರಡು ವಿಷಯಗಳಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು.

**ಅಥವಾ**

(2) ಇತಿಹಾಸ/ ಅರ್ಥಶಾಸ್ತ್ರ/ ಭೂಗೋಳಶಾಸ್ತ್ರ/ರಾಜ್ಯಶಾಸ್ತ್ರ ವಿಷಯಗಳ ಪೈಕಿ ಒಂದು ವಿಷಯದಲ್ಲಿ ಮೂರು ವರ್ಷವೂ ಅಧ್ಯಯನ ಮಾಡಿರುವುದರೊಂದಿಗೆ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು ಮತ್ತು ಕನ್ನಡ/ ಇಂಗ್ಲಿಷ್/ ಹಿಂದಿ/ಮರಾಠಿ/ ಉರ್ದು/ ತೆಲುಗು/ ತಮಿಳು/ ಕೊಂಕಣಿ ಭಾಷೆಗಳ ಪೈಕಿ ಒಂದು ಭಾಷೆಯನ್ನು ಐಚ್ಛಿಕವಾಗಿ ಮೂರು ವರ್ಷವೂ ಅಧ್ಯಯನ ಮಾಡಿ ಸದರಿ ಭಾಷಾ ವಿಷಯದಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು.

ಪರಂತು ಪರಿಶಿಷ್ಟಜಾತಿ/ಪರಿಶಿಷ್ಟ ವರ್ಗ/ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ-1/ ವಿಕಲಚೇತನರಿಗೆ ನಿಗದಿಪಡಿಸಿರುವ ಎರಡು ವಿಷಯಗಳಲ್ಲಿ ಕನಿಷ್ಟ ಶೇಕಡ 45 ಅಂಕಗಳನ್ನು ಪಡೆದಿರಬೇಕು

(3) ಶಿಕ್ಷಣದಲ್ಲಿ, ಡಿಪ್ಲೋಮಾ ಅಥವಾ ಪದವಿ ಹಂತಗಳಲ್ಲಿ ಇತಿಹಾಸ/ ಅರ್ಥಶಾಸ್ತ್ರ/ ಭೂಗೋಳಶಾಸ್ತ್ರ/ರಾಜ್ಯಶಾಸ್ತ್ರ ವಿಷಯಗಳ ಪೈಕಿ ಒಂದು ವಿಷಯವನ್ನು ಬೋಧನಾ ವಿಷಯವಾಗಿ (ಮೆಥಡಾಲಜಿ) ಅಭ್ಯಾಸ ಮಾಡಿರಬೇಕು.

**ಸಾಮಾನ್ಯ ಸೂಚನೆಗಳು:-**

1) 6 ರಿಂದ 7/8 ನೇ ತರಗತಿಗಳ ಶಾಲೆಗಳಿಗೆ ನೇಮಕವಾಗುವ ಪದವೀಧರ ಪ್ರಾಥಮಿಕ ಶಿಕ್ಷಕರು ಕಾರ್ಯಭಾರದ ಹೊಂದಾಣಿಕೆಗೆ ಅದೇ ಶಾಲೆಯ ಅಥವಾ ಹತ್ತಿರದ ಶಾಲೆಯ ತರಗತಿಗಳಿಗೆ ಅವರು ನೇಮಕಾತಿ ಹೊಂದಿರುವ ವಿಷಯದ ಜೊತೆಗೆ ಯಾವುದೇ ಇತರೆ ವಿಷಯಗಳ ಬೋಧನೆ ಮಾಡಲು ಸೂಚಿಸಬಹುದು.
2) ಆಂಗ್ಲ ಮತ್ತು ಸಮಾಜ ಪಾಠಗಳು ವಿಷಯಗಳ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎರಡೂ ಹುದ್ದೆಗಳಿಗೆ ಆಯ್ಕೆಯಾದಲ್ಲಿ ಪ್ರಥಮ ಆದ್ಯತೆ ನೀಡಿದ ಹುದ್ದೆಗೆ ಮಾತ್ರ ಪರಿಗಣಿಸಲಾಗುವುದು.
3) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ. ಆನ್‌ಲೈನ್ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದೊಳಗೆ ವಿದ್ಯಾರ್ಹತೆಯ ಅಂಕಪಟ್ಟಿ ಹಾಗೂ ಇತರೆ ಸರ್ಟಿಫಿಕೇಟ್‌ಗಳನ್ನು ಪಡೆದಿರಬೇಕು.

***09] ವಯೋಮಿತಿ:***

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯು

**[ಅ]** ಕನಿಷ್ಠ 21 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

**[ಆ]** ಗರಿಷ್ಠ ವಯೋಮಿತಿ:

| | |
|---|---|
| ಸಾಮಾನ್ಯ ವರ್ಗ | 40 ವರ್ಷ |
| 2ಎ, 2ಬಿ, 3ಎ, 3ಬಿ | 43 ವರ್ಷ |
| ಪ.ಜಾ / ಪ.ಪಂ / ಪ್ರವರ್ಗ-1 / ವಿಕಲಚೇತನ ಅಭ್ಯರ್ಥಿಗಳಿಗೆ | 45 ವರ್ಷ |

***10] ಮೆರಿಟ್ ನಿರ್ಧರಿಸುವ ವಿಧಾನ:***

***6-8 ನೇ ತರಗತಿ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗಾಗಿ***

ಆಯ್ಕೆ ಪ್ರಾಧಿಕಾರವು ನೇಮಕಾತಿಗೆ ವಿಷಯವಾರು ಮತ್ತು ಮಾಧ್ಯಮವಾರು ಹಾಗೂ ಪ್ರವರ್ಗವಾರು ಅಧಿಸೂಚಿಸಿದ ಹುದ್ದೆಗಳಿಗೆ ಅನುಸಾರವಾಗಿ ಸ್ಪರ್ಧಾತ್ಮಕ ಪರೀಕ್ಷೆ, ಟಿ.ಇ.ಟಿ ಪರೀಕ್ಷೆ, ಪದವಿ ಶಿಕ್ಷಣ ಮತ್ತು ಶಿಕ್ಷಕರ ಶಿಕ್ಷಣ ಕೋರ್ಸ್‌ನಲ್ಲಿ ಪಡೆದ ಶೇಕಡವಾರು ಅಂಕಗಳನ್ನು ಆಧರಿಸಿ ಈ ಕೆಳಗೆ ವಿವರಿಸಿದಂತೆ ವೆಯಿಟೇಜ್(weightage) ಉಪಯೋಗಿಸಿ derived percentage ಲೆಕ್ಕಹಾಕಿ ಅದರ ಆಧಾರದ ಮೇಲೆ ಪ್ರತ್ಯೇಕವಾಗಿ ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಲಾಗುವುದು.

ಅ) Derived percentage ಲೆಕ್ಕಹಾಕಲು ಅಭ್ಯರ್ಥಿಯು ಡಿಪ್ಲೊಮ ಇನ್ ಎಲಿಮೆಂಟರಿ ಎಜುಕೇಶನ್ ಅಥವಾ ಬಿ.ಇಡಿ ಅಥವಾ ಡಿಪ್ಲೊಮ ಇನ್ ಸ್ಪೆಷಲ್ ಎಜುಕೇಶನ್ ಅಥವಾ ಬಿ.ಇಡಿ (ಸ್ಪೆಷಲ್ ಎಜುಕೇಶನ್) ವಿದ್ಯಾರ್ಹತೆ ಹೊಂದಿದ್ದಲ್ಲಿ ಕೆಳಗಿನಂತೆ ವೆಯಿಟೇಜ್(weightage)ನ್ನು ಪರಿಗಣಿಸಲಾಗುವುದು.

| | | |
|---|---|---|
| 1 | ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.35 |
| 2 | ಟಿ.ಇಟಿ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.15 |
| 3 | ಪದವಿಯಲ್ಲಿ ಪಡೆದ ಅಂಕಗಳ | 0.25 |
| 4 | ಶಿಕ್ಷಕರ ಶಿಕ್ಷಣ ಕೋರ್ಸ್‌ನಲ್ಲಿ ಪಡೆದ ಅಂಕಗಳ | 0.25 |

ಆ) Derived percentage ಲೆಕ್ಕಹಾಕಲು ಅಭ್ಯರ್ಥಿಯು ನಾಲ್ಕು ವರ್ಷಗಳ ಶಿಕ್ಷಕರ ಶಿಕ್ಷಣ ಪದವಿಯನ್ನು ಹೊಂದಿದ್ದಲ್ಲಿ ವೆಯಿಟೇಜ್‌ನ್ನು ಈ ಮುಂದಿನಂತೆ ಪರಿಗಣಿಸಲಾಗುವುದು

| | | |
|---|---|---|
| 1 | ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.35 |
| 2 | ಟಿ.ಇಟಿ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.15 |
| 3 | ನಾಲ್ಕು ವರ್ಷಗಳ ಬಿ.ಎಲ್.ಇಡಿ, ಅಥವಾ ಬಿಎ/ಬಿಎಸ್ಸಿಇಡಿ ಅಥವಾ ಬಿಎಇಡಿ ಅಥವಾ ಬಿಎಸ್ಸಿಇಡಿ. ಪದವಿಯಲ್ಲಿ ಪಡೆದ ಅಂಕಗಳ | 0.50 |

ಮೇಲೆ ಹೇಳಿದ ಪ್ರಕಾರ ವೆಯಿಟೇಜ್‌ನ್ನು ಲೆಕ್ಕ ಹಾಕಿದಾಗ ಮೆರಿಟ್ ಪಟ್ಟಿಯಲ್ಲಿ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ derived percentage ಅಂಕಗಳನ್ನು ಪಡೆದಲ್ಲಿ ವಯಸ್ಸನ್ನು ಆಧರಿಸಿ ವಯಸ್ಸಿನಲ್ಲಿ ಹಿರಿಯರಾದವರನ್ನು ಮೆರಿಟ್ ಪಟ್ಟಿಯಲ್ಲಿ ವಯಸ್ಸಿನಲ್ಲಿ ಕಿರಿಯರಿಗಿಂತ ಮೊದಲು ಪರಿಗಣಿಸಲಾಗುವುದು.

***11] ಹುದ್ದೆಗಳ ಮೀಸಲಾತಿ*** :

(1) ಹುದ್ದೆಗಳ ಮೀಸಲಾತಿಯು ಕರ್ನಾಟಕ ಸಿವಿಲ್ ಸರ್ವೀಸಸ್ [ಜನರಲ್ ರೆಕ್ರೂಟ್‌ಮೆಂಟ್] ರೂಲ್ಸ್ 1977ರ ನಿಯಮ-9ರಲ್ಲಿನ ಪ್ರಮಾಣಾನುಸಾರ ಮತ್ತು ಕಾಲಕಾಲಕ್ಕೆ ಹೊರಡಿಸಲಾಗುವ ಕಾನೂನುಗಳು, ನಿಯಮಗಳು ಹಾಗೂ ಕೆಳಕಂಡ ಜಾರಿಯಲ್ಲಿರುವ ಸರ್ಕಾರದ ಆದೇಶಗಳನ್ನೂ ಒಳಗೊಂಡಂತೆ ಇರುತ್ತವೆ.

*i.* ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರೆ ಹಿಂದುಳಿದ ವರ್ಗಗಳ ವ್ಯಕ್ತಿಗಳಿಗೆ ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ನಿಯಮಗಳು

ii. ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿ ಅಥವಾ ಹುದ್ದೆಗಳ ಮೀಸಲಾತಿ ಅಧಿನಿಯಮ 2000

*iii.* ಕರ್ನಾಟಕ ಸಿವಿಲ್ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977 ನಿಯಮ-9ರ ಪ್ರಕಾರ ವಿಕಲಚೇತನರು ಹಾಗೂ ಮಾಜಿ ಸೈನಿಕರು, ನಿಗದಿಪಡಿಸಿದ ಪ್ರಮಾಣದಲ್ಲಿ

*iv.* ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 23 ಎಸ್‌ಆರ್‌ಆರ್ 1999, ದಿನಾಂಕ: 23.11.2000ರನ್ವಯ ಯೋಜನಾ ನಿರಾಶ್ರಿತ ಅಭ್ಯರ್ಥಿಗಳಿಗೆ, ನಿಗದಿಪಡಿಸಿದ ಪ್ರಮಾಣದಲ್ಲಿ

v. ಎಲ್ಲಾ ಪ್ರವರ್ಗಗಳಲ್ಲಿ ಶೇಕಡ 50ಕ್ಕಿಂತ ಕಡಿಮೆಯಿಲ್ಲದಂತೆ ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

(2) ***ಮೀಸಲಾತಿ ಸೌಲಭ್ಯ ಪಡೆಯಲು ಅಭ್ಯರ್ಥಿಗಳು ಸಲ್ಲಿಸಬೇಕಾದ ಪ್ರಮಾಣ ಪತ್ರಗಳು:***

| | | |
|---|---|---|
| *01* | ಅನುಸೂಚಿತ ಜಾತಿ ಅಥವಾ ಅನುಸೂಚಿತ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ-ಡಿ [ನಿಯಮ-3.ಎ(2)(3)], ಸರ್ಕಾರದ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ:132: ಎಸ್‌ಎಡಿ: 1997, ದಿನಾಂಕ:08.02.2000 |
| *02* | ಹಿಂದುಳಿದ ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳು. | ನಮೂನೆ-ಇ [ನಿಯಮ-3.ಎ(2)(3)], ಸರ್ಕಾರದ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ: 132: ಎಸ್‌ಎಡಿ: 1997, ದಿನಾಂಕ:08.02.2000 |
| *03* | ಹಿಂದುಳಿದ ಪ್ರವರ್ಗ-2.ಎ, 2.ಬಿ, 3.ಎ: ಮತ್ತು 3.ಬಿ ಈ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು. | ನಮೂನೆ-ಎಫ್ [ನಿಯಮ-3.ಎ(2)(3)] ಸರ್ಕಾರದ ಆದೇಶಸಂಖ್ಯೆ: ಎಸ್‌ಡಬ್ಲ್ಯೂಡಿ: 132: ಎಸ್‌ಎಡಿ: 1997, ದಿನಾಂಕ:08.02.2000 |

ಅಭ್ಯರ್ಥಿಗಳು ಮೇಲೆ ನಿಗದಿಪಡಿಸಿರುವ ನಿಗದಿತ ನಮೂನೆಗಳಲ್ಲಿಯೇ ಸಂಬಂಧಿಸಿದ ವ್ಯಾಪ್ತಿಯ ತಹಸೀಲ್ದಾರರ ದರ್ಜೆಗಿಂತ ಕಡಿಮೆ ಇಲ್ಲದ ರೆವಿನ್ಯೂ ಪ್ರಾಧಿಕಾರಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಮೇಲ್ಕಂಡ ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರುವ ನಿಯಮಗಳ ಪ್ರಕಾರವಿರಬೇಕು ಮತ್ತು ಅವಧಿ ಮೀರಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**(3) ಸಾಮಾನ್ಯ ಅರ್ಹತೆ ಸೇರಿದಂತೆ ಪ್ರತಿ ಮೀಸಲಾತಿ ಪ್ರವರ್ಗಗಳಿಗೆ ಈ ಕೆಳಕಂಡ ಆದೇಶಗಳ ಪ್ರಕಾರ.**"ಸಮತಳ ಮೀಸಲಾತಿ" [Horizontal reservation] ಅನ್ವಯ ಹುದ್ದೆಗಳ ಮೀಸಲಾತಿ ವಿವರ

| | | | |
|---|---|---|---|
| *01* | ಮಾಜಿ ಸೈನಿಕರಿಗೆ | ಶೇಕಡಾ - 10 | ಕರ್ನಾಟಕ ಸಿವಿಲ್ ಸರ್ವೀಸಸ್ [ಜನರಲ್ ರೆಕ್ರೂಟ್‌ಮೆಂಟ್] ರೂಲ್ಸ್ 1977ರ ನಿಯಮ-9ರನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 97 ಸೇನೆನಿ 2002, ದಿ:22.11.2002 ಮತ್ತು ಸಂಖ್ಯೆ:ಸಿಆಸುಇ 53 ಸೇನೆನಿ 2007, ದಿ:04.01.2008. |
| *02* | ಅಂಗವಿಕಲರಿಗೆ | ಶೇಕಡಾ-5 | ಕರ್ನಾಟಕ ಸಿವಿಲ್ ಸರ್ವೀಸಸ್ [ಜನರಲ್ ರೆಕ್ರೂಟ್‌ಮೆಂಟ್] ರೂಲ್ಸ್ 1977ರ ನಿಯಮ-9ರನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 97 ಸೇನೆನಿ 2002, ದಿ:22.11.2002 ಮತ್ತು ಸಂಖ್ಯೆ ಸಿಆಸುಇ 53 ಸೇನೆನಿ 2007, ದಿ:04.01.2008. |
| *03* | ಯೋಜನೆಗಳಿಂದ ನಿರಾಶ್ರಿತರಾದವರ ಕುಟುಂಬದವರ ಅಭ್ಯರ್ಥಿಗಳಿಗಾಗಿ | ಶೇಕಡಾ-5 | ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 23 ಎಸ್‌ಆರ್‌ಆರ್ 99 ದಿನಾಂಕ:23.11.2000 ಮತ್ತು ಸಂಖ್ಯೆ ಸಿಆಸುಇ 97 ಸೇನಿನಿ 2002, ದಿ:22.11.2002 ಮತ್ತು ಸಂಖ್ಯೆ ಸಿಆಸುಇ 53 ಸೇನೆನಿ 2007, ದಿ:04.01.2008. |
| *04* | ಗ್ರಾಮೀಣ ಅಭ್ಯರ್ಥಿಗಳಿಗೆ | ಶೇಕಡಾ-25 | ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ [ರಾಜ್ಯ ಸಿವಿಲ್ ಸೇವೆಗಳಲ್ಲಿ ನೇಮಕಾತಿ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕ] 2000 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 97 ಸೇನಿನಿ 2002 ದಿ:22.11.2002 ಮತ್ತು ಸಂಖ್ಯೆ:ಸಿಆಸುಇ 53 ಸೇನೆನಿ 2007, ದಿ:04.01.2008. |
| *05* | ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗಾಗಿ | ಶೇಕಡಾ-5 | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 71 ಎಸ್‌ಆರ್‌ಆರ್ 2001 ದಿ: 24.10.2002 ಮತ್ತು ಸಂಖ್ಯೆ:ಸಿಆಸುಇ 97 ಸೇನೆನಿ 2002, ದಿ:22.11.2002 ಮತ್ತು ಸಂಖ್ಯೆ:ಸಿಆಸುಇ 53 ಸೇನೆನಿ 2007, ದಿ:04.01.2008 |
| 06 | ಮಹಿಳಾ ಅಭ್ಯರ್ಥಿಗಳಿಗೆ | ಶೇಕಡಾ-50 | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 626 ಪಿಬಿಎಸ್ 2014, ದಿನಾಂಕ: 07.08.2017 ರ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಮಹಿಳೆಯರಿಗೆ ಪ್ರತಿ ಗುಂಪಿನಲ್ಲೂ ಶೇಕಡಾ 50ಕ್ಕಿಂತ ಕಡಿಮೆ ಇಲ್ಲದಂತೆ ಹುದ್ದೆಗಳನ್ನು ಮೀಸಲಿರಿಸಲಾಗಿದೆ. |

*11]* (3) 01.***ಮಾಜಿ ಸೈನಿಕ ಅಭ್ಯರ್ಥಿಗಳು:***

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ: 01-04-1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ: 21-10-1995 ರನ್ವಯ ನೇರ ನೇಮಕಾತಿಗಳಲ್ಲಿ ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು(ಸಾಮಾನ್ಯ ನೇಮಕಾತಿ) ನಿಯಮಗಳು, 1977ರಲ್ಲಿದ್ದಂತೆ ಮಾಜಿ ಸೈನಿಕರ ವಿವರ ಕೆಳಕಂಡಂತೆ ಇದೆ.

*1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ, ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆ ಆಗುವುದಿಲ್ಲ.*

***ಮತ್ತು***

*ಅ] ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ*

***ಅಥವಾ***

*ಆ] ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆ ಆದವರು.*

***ಅಥವಾ***

*ಇ] ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ,*

***ಅಥವಾ***

*ಈ] ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-*

1. *ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು*
2. *ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ*
3. *ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು*

*2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.*

*ವಿವರಣೆ:-ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇವೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇವೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು/ಮಾಜಿ ಸೈನಿಕರ ಅವಲಂಬಿತರು, ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ/ ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಬೇಕು.*

*11]* (3) 02. ***ಅಂಗವಿಕಲ ಅಭ್ಯರ್ಥಿಗಳು:***

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಏಂಏಂಡಬ್ಲ್ಯೂ:107:ಪಿಹೆಚ್‌ಪಿ:2003, ದಿ:11.07.2003 ಮತ್ತು ಸಂಖ್ಯೆ:ಡಿಪಿಎಆರ್:50:ಎಸ್‌ಆರ್‌ಆರ್:2000 ದಿ:30.09.2005ರ ಅನ್ವಯ "ಅಂಗವಿಕಲ ಅಭ್ಯರ್ಥಿಯು" ವೈದ್ಯಕೀಯ ಪ್ರಮಾಣ ಪತ್ರವನ್ನು ಹೊಂದಿರಬೇಕು. ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ್: ಸಿಆಸು:50:ಎಸ್‌ಆರ್‌ಆರ್:2007, ದಿ:26.07.2011ರಲ್ಲಿ ನಿಗದಿಪಡಿಸಿರುವ ಅಂಗವಿಕಲ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು. ಸರ್ಕಾರಿ ಆದೇಶ ಸಂಖ್ಯೆ:ಎಂ.ಎ.ಇ:107:ಪಿಹೆಚ್‌ಪಿ:2003 ದಿ:11.07.2003ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ವೈದ್ಯಕೀಯ ಪ್ರಮಾಣ ಪತ್ರಗಳನ್ನು ಸಕ್ಷಮ ಜಿಲ್ಲಾ ವೈದ್ಯಕೀಯ ಮಂಡಳಿಯಿಂದ ಪಡೆದಿರಬೇಕು. ಈ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದುಕೊಂಡಿರಬೇಕು.

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ:50:ಎಸ್‌ಆರ್‌ಆರ್:2007, ದಿ:26.07.2011ರಲ್ಲಿ ಹಾಗೂ ಸಂಖ್ಯೆ: ಸಿಆಸುಇ 54 ಎಸ್‌ಆರ್‌ಆರ್ 2012 ದಿನಾಂಕ: 04.08.2012 ರಲ್ಲಿ ರಾಜ್ಯ ಸರ್ಕಾರವು ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಅಂಗವಿಕಲರು ನಿರ್ವಹಿಸಬಹುದಾದ ಹುದ್ದೆಗಳನ್ನು ಗುರುತಿಸಿದೆ. ಅದರಂತೆ ಮೀಸಲಾತಿ ಸೌಲಭ್ಯ ನೀಡಲಾಗುವುದು.

*11]* (3) 03. ***ಯೋಜನಾ ನಿರಾಶ್ರಿತ ಕುಟುಂಬದ ಅಭ್ಯರ್ಥಿಗಳು:***

ಸರ್ಕಾರಿ ಆದೇಶ ಸಂ.ಡಿಪಿಎಆರ್ 23 ಎಸ್ ಆರ್.ಆರ್ 99 ದಿನಾಂಕ: 23.11.2000 ರನ್ವಯ ಯೋಜನೆಗಳಿಂದ ನಿರಾಶ್ರಿತರಾದ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ.) ಕುಟುಂಬದ ಅಭ್ಯರ್ಥಿಗಳು ಸರ್ಕಾರಿ ಸುತ್ತೋಲೆ ಸಂಖ್ಯೆ : ಸಿಆಸುಇ 44 ಸೇನೇನಿ ದಿನಾಂಕ: 27.07.2001 ರಲ್ಲಿ ನಿಗಧಿಪಡಿಸಲಾದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಸೀಲ್ದಾರ್‌ರವರಿಂದ ಆಸ್ತಿಯನ್ನು ಸ್ವಾಧೀನಪಡಿಸಿಕೊಂಡಿರುವ ದಿನಾಂಕವನ್ನು ಸ್ಪಷ್ಟವಾಗಿ ನಮೂದಿಸಿರುವ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು, ನಂತರದ ದಿನಾಂಕದಲ್ಲಿ ಪಡೆದಿರುವ ಪ್ರಮಾಣಪತ್ರವನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳು ಯೋಜನಾ ನಿರಾಶ್ರಿತ ಮೀಸಲಾತಿಗೆ ಅನರ್ಹರಾಗಿರುತ್ತಾರೆ.

*11]* (3) 04. ***ಗ್ರಾಮೀಣ ಅಭ್ಯರ್ಥಿಗಳು:***

ಗ್ರಾಮೀಣ ಅಭ್ಯರ್ಥಿ ಎಂದರೆ ಕರ್ನಾಟಕ ಪೌರ ನಿಯಮಗಳ ಅಧಿನಿಯಮ-1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರಡಿಯಲ್ಲಿ ನಿರ್ಧಿಷ್ಠಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶ ಹೊರತಾಗಿ ಇತರೆ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿದ ಅಭ್ಯರ್ಥಿ.

ಗ್ರಾಮೀಣ ಅಭ್ಯರ್ಥಿಗಳ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವ ಪ್ರವರ್ಗ-1, 2.ಎ., 2.ಬಿ., 3.ಎ., 3.ಬಿ., ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳ ತಮ್ಮ ಮೀಸಲಾತಿ ಪ್ರಮಾಣಪತ್ರದ ಜೊತೆಗೆ ಸರ್ಕಾರದ ಆದೇಶ ಸಂಖ್ಯೆ ಡಿಪಿಎಆರ್ 96 ಸೇನೆನಿ 2005, ದಿನಾಂಕ: 10.08.2005ರಲ್ಲಿ ನೀಡಿರುವ ನಿಗದಿತ ನಮೂನೆ-2 ರಲ್ಲಿ ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರವನ್ನು ಪಡೆದಿರಬೇಕು.

ಸಾಮಾನ್ಯ ವರ್ಗದ ಅಭ್ಯರ್ಥಿಗಳು ಮೇಲುಸ್ಥರದಲ್ಲಿ [creamy layer] ಬರುವುದಿಲ್ಲವೆಂದು ನಮೂನೆ-1ರಲ್ಲಿ ಸಂಬಂಧಿಸಿದ ತಹಸೀಲ್ದಾರರವರಿಂದ ಪಡೆದ ಪ್ರಮಾಣ ಪತ್ರದ ಜೊತೆಗೆ ಸರ್ಕಾರದ ಆದೇಶ ಸಂಖ್ಯೆ ಡಿಪಿಎಆರ್ 96 ಸೇನೆನಿ 2005, ದಿನಾಂಕ: 10.08.2005ರಲ್ಲಿ ನಿಗದಿಪಡಿಸಲಾದ ನಮೂನೆ-2ರಲ್ಲಿ ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

*11]* (3) 05. ***ಕನ್ನಡ ಮಾಧ್ಯಮದ ಅಭ್ಯರ್ಥಿಗಳು:***

1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳು ಈ ಮೀಸಲಾತಿಗೆ ಅರ್ಹರಾಗುತ್ತಾರೆ. ಈ ಅಭ್ಯರ್ಥಿಗಳು ಸಂಬಂಧಿಸಿದ ಮುಖ್ಯೋಪಾಧ್ಯಾಯರಿಂದ ನಿಗದಿತ ನಮೂನೆಯಲ್ಲಿ ದೃಢೀಕೃತ ಪ್ರಮಾಣ ಪತ್ರಗಳನ್ನು ಪಡೆದ ನಂತರ ಕ್ಷೇತ್ರ ಶಿಕ್ಷಣಾಧಿಕಾರಿಗಳವರ ಮೇಲುಸಹಿ ಪಡೆದಿರಬೇಕು.

ಮೇಲ್ಕಂಡ ಎಲ್ಲಾ ಪ್ರಮಾಣ ಪತ್ರಗಳಲ್ಲಿ ಅನ್ವಯವಾಗುವ ದಾಖಲೆಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗೆ ಅಭ್ಯರ್ಥಿಗಳು ಪಡೆದುಕೊಂಡಿರಬೇಕು. ಹಾಗೂ ದಾಖಲಾತಿ ಪರಿಶೀಲನೆಯ ಸಂದರ್ಭದಲ್ಲಿ ಮೂಲ ಹಾಗೂ ದೃಢೀಕೃತ ಪ್ರತಿಗಳನ್ನು ಪರಿಶೀಲನೆಗೆ ಪ್ರಸ್ತುತಪಡಿಸಬೇಕು.

***12] ಸ್ಪರ್ಧಾತ್ಮಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ:***

ಸ್ಪರ್ಧಾತ್ಮಕ ಪರೀಕ್ಷೆಯ ಮೌಲ್ಯಮಾಪನ ಮುಕ್ತಾಯವಾದ ನಂತರ ಫಲಿತಾಂಶವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗು ಈ ಬಗ್ಗೆ ದಿನಪತ್ರಿಕೆಗಳಲ್ಲಿ ಮಾಹಿತಿಯನ್ನು ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಫಲಿತಾಂಶವನ್ನು ವೆಬ್‌ಸೈಟಿನಲ್ಲಿ ತಮ್ಮ ಲಾಗಿನ್ ಮೂಲಕ ತಿಳಿದುಕೊಳ್ಳಬಹುದಾಗಿದೆ. ಹಾಗು ತಮ್ಮ derived percentage ನ್ನು ಸಹಾ ತಿಳಿದುಕೊಳ್ಳಬಹುದಾಗಿದೆ.

***13] ತಾತ್ಕಾಲಿಕ ಪಟ್ಟಿ ಪ್ರಕಟಿಸುವ ಮುನ್ನ ದಾಖಲಾತಿಗಳ ಪರಿಶೀಲನೆ:***

ಕಂಡಿಕೆ 10 ರಲ್ಲಿ ತಿಳಿಸಿರುವಂತೆ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆ, ಟಿಇಟಿ ಪರೀಕ್ಷೆ, ಪದವಿ ಪರೀಕ್ಷೆ ಹಾಗು ಶಿಕ್ಷಕರ ಶಿಕ್ಷಣ ಕೋರ್ಸ್‌ಗಳಲ್ಲಿ ಗಳಿಸಿರುವ ಅಂಕಗಳನ್ನು ಪರಿಗಣಿಸಿ derived percentage ಲೆಕ್ಕಹಾಕಿ ಮೆರಿಟ್ ಆಧಾರದ ಮೇಲೆ ಅರ್ಹರಾದ ಹಾಗೂ ಕ್ಲೇಮು ಮಾಡಿರುವ ಮೀಸಲಾತಿಯನುಸಾರ ಅಧಿಸೂಚಿತ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಆಯ್ಕೆ ಪ್ರಾಧಿಕಾರದಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಮುನ್ನ ಅಧಿಸೂಚಿಸಿದ ಹುದ್ದೆಗಳ ಸಂಖ್ಯೆಯ ಎರಡರಷ್ಟರವರೆಗಿನ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ದಾಖಲಾತಿಗಳ ಪರಿಶೀಲನೆಯ ಉದ್ದೇಶಕ್ಕಾಗಿ ಕರೆಯಲಾಗುವುದು. ಅಂತಹ ಅಭ್ಯರ್ಥಿಗಳ ವಿವರವನ್ನು ಇಲಾಖಾ ವೆಬ್‌ಸೈಟ್ http://schooleducation.kar.nic.in ನಲ್ಲಿ ಪ್ರಕಟಿಸಲಾಗುವುದು ಹಾಗೂ ದಿನಪತ್ರಿಕೆಗಳಲ್ಲಿ ಮಾಹಿತಿಯ ಪ್ರಕಟಣೆ ನೀಡಲಾಗುವುದು.

ಎಲ್ಲಾ ಅಭ್ಯರ್ಥಿಗಳು ತಮ್ಮ ವಿವರಗಳನ್ನು ಅವರ ಲಾಗಿನ್ ಮೂಲಕ ಪರಿಶೀಲಿಸಿಕೊಳ್ಳಬಹುದು. ಇದಕ್ಕೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ನಿಗದಿತ ನಮೂನೆಯಲ್ಲಿ ನಿಗದಿತ ದಿನಾಂಕದೊಳಗೆ ಆಯ್ಕೆ ಪ್ರಾಧಿಕಾರಕ್ಕೆ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬಹುದು. ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ಮಾಹಿತಿಗಳನ್ನು ಮಾತ್ರ ಸರಿಪಡಿಸಿಕೊಳ್ಳಲು ಅವಕಾಶವಿರುತ್ತದೆ. ಶೈಕ್ಷಣಿಕ ಮಾಹಿತಿಯನ್ನು ಹೊರತುಪಡಿಸಿ ಉಳಿದ ಯಾವುದೇ ಮಾಹಿತಿಯನ್ನು ಬದಲಾಯಿಸಿಕೊಳ್ಳಲು ಅವಕಾಶವಿರುವುದಿಲ್ಲ.

ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಅಭ್ಯರ್ಥಿಗಳ ಆಧಾರ್ ಗುರುತಿನ ನೈಜತೆಯನ್ನು ಪರಿಶೀಲನೆಗೆ ಒಳಪಡಿಸಲಾಗುವುದು. ಅದರಲ್ಲಿ ಅಭ್ಯರ್ಥಿಯ ನೈಜತೆ ದೃಢಪಡದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

***14] ಆಯ್ಕೆ ಪಟ್ಟಿ :***

ದಾಖಲಾತಿಗಳ ಪರಿಶೀಲನೆಯ ನಂತರ ಮತ್ತು ಶೈಕ್ಷಣಿಕ ಮಾಹಿತಿಗಳನ್ನು ಸರಿಪಡಿಸಲು ಕೋರಿ ಬಂದ ಆಕ್ಷೇಪಣೆಗಳ ಪರಿಶೀಲನಾ ಕಾರ್ಯ ಮುಗಿದ ನಂತರ ಆಯ್ಕೆ ಪ್ರಾಧಿಕಾರವು ಅಧಿಸೂಚಿಸಿದ ಹುದ್ದೆಗಳ ಸಂಖ್ಯೆಗೆ ಸಮನಾಗಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗುತ್ತದೆ. ಆಕ್ಷೇಪಣೆಗಳನ್ನು ಸಲ್ಲಿಸಲು ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗುತ್ತದೆ. ಈ ಬಗ್ಗೆ ಸೂಚನೆಯನ್ನು ಇಲಾಖಾ ವೆಬ್ ಸೈಟ್ ಮತ್ತು ದಿನಪತ್ರಿಕೆಗಳಲ್ಲಿ ನೀಡಲಾಗುತ್ತದೆ. ವೈಯಕ್ತಿಕವಾಗಿ ಈ ಬಗ್ಗೆ ಯಾವುದೇ

ಸೂಚನೆ ನೀಡುವುದಿಲ್ಲ. ಯಾವುದೇ ಅಭ್ಯರ್ಥಿಯು ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸಿದಲ್ಲಿ ನಿಗದಿತ ದಿನಾಂಕದೊಳಗೆ ಆಯ್ಕೆ ಪ್ರಾಧಿಕಾರಕ್ಕೆ ಸಲ್ಲಿಸಬಹುದು. ಯಾವುದೇ ಅಭ್ಯರ್ಥಿ ಆಕ್ಷೇಪಣೆಗಳನ್ನು ಸಲ್ಲಿಸದಿದ್ದಲ್ಲಿ ಅಂತಿಮ ಆಯ್ಕೆ ಪಟ್ಟಿಯಲ್ಲಿ ಯಾವುದೇ ರೀತಿಯ ಪರಿಹಾರಕ್ಕೆ ಅರ್ಹತೆ ಪಡೆಯುವುದಿಲ್ಲ. ಹಾಗೂ ಅಂತಿಮ ಆಯ್ಕೆಪಟ್ಟಿಯ ಪ್ರಕಟಣೆಯ ನಂತರ ಮತ್ತೆ ಅವರ ಅರ್ಹತೆಯ ಪರಿಶೀಲನೆಗಾಗಲೀ ಅಥವಾ ಇನ್ನಾವುದೇ ಬಗೆಯ ಪರಿಹಾರಕ್ಕಾಗಲೀ ಅವಕಾಶವಿರುವುದಿಲ್ಲ.

ತದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸ್ವೀಕರಿಸಲಾದ ಆಕ್ಷೇಪಣೆಗಳನ್ನು ಪರಿಗಣಿಸಿ ಅಧಿಸೂಚಿಸಿದ ಹುದ್ದೆಗಳ ಸಂಖ್ಯೆಗನುಗುಣವಾಗಿ ಮುಖ್ಯ ಪಟ್ಟಿಯನ್ನು ಪ್ರಕಟಿಸಲಾಗುವುದು.

ಆಯ್ಕೆ ಪ್ರಾಧಿಕಾರವು ನೇಮಕಾತಿ ಸಮಯದಲ್ಲಿ ಅಭ್ಯರ್ಥಿಗಳು ಯಾವ ನಿರ್ದಿಷ್ಟ ಹುದ್ದೆಗೆ ಆಯ್ಕೆಯನ್ನು ಬಯಸುತ್ತಾರೋ ಸಾಧ್ಯವಾದಷ್ಟು ಮಟ್ಟಿಗೆ ಅಂತಹ ಆಯ್ಕೆಯನ್ನು ಪರಿಗಣಿಸಲಾಗುವುದು.

ಮೇಲ್ಕಂಡ ವಿಧಾನದಲ್ಲಿ ಸಿದ್ಧಪಡಿಸಲಾದ ಮುಖ್ಯ ಪಟ್ಟಿಯಲ್ಲಿ ಸೇರಲ್ಪಟ್ಟ ಅಭ್ಯರ್ಥಿಗಳನ್ನು ಆಯ್ಕೆ ಪಟ್ಟಿಯ ಕ್ರಮ ಸಂಖ್ಯೆಯ ಅನುಕ್ರಮವಾಗಿ ಅಗತ್ಯವಿರುವ ಪರಿಶೀಲನೆಯ ನಂತರ ಎಲ್ಲಾ ರೀತಿಯಲ್ಲೂ ಅರ್ಹರಾದ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದು.

***ಸೂಚನೆ :*** ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸುವ ಮೊದಲು ಪ್ರತಿ ಅಭ್ಯರ್ಥಿಯ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಸಲ್ಲಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿರುತ್ತದೆ. ಅದರಂತೆ ಅಭ್ಯರ್ಥಿಗಳು ಮೂಲ ದಾಖಲೆ/ಪ್ರಮಾಣ ಪತ್ರಗಳು, ಅರ್ಜಿಯ ಪ್ರತಿ ಮತ್ತು ಗುರುತಿನ ಪತ್ರದ ಪ್ರತಿ, ಆಧಾರ್ ಸಂಖ್ಯೆ ಸಹಿತ ಪರಿಶೀಲನೆಗೆ ಸಲ್ಲಿಸಬೇಕು. ಈ ಬಗ್ಗೆ ಸೂಚನೆಯನ್ನು ಇಲಾಖಾ ವೆಬ್ ಸೈಟ್ ಮತ್ತು ದಿನಪತ್ರಿಕೆಗಳಲ್ಲಿ ನೀಡಲಾಗುತ್ತದೆ. ಅಭ್ಯರ್ಥಿಗಳಿಗೆ ಈ ಬಗ್ಗೆ ವೈಯಕ್ತಿಕವಾಗಿ ಸೂಚನೆ ನೀಡಲಾಗುವುದಿಲ್ಲ. ಮೂಲ ದಾಖಲೆ /ಪ್ರಮಾಣ ಪತ್ರಗಳನ್ನು ಸಲ್ಲಿಸದಿರುವ/ದಾಖಲಾತಿಗಳ ಪರಿಶೀಲನೆಗೆ ಗೈರುಹಾಜರಾಗುವ/ಅಪೂರ್ಣ ದಾಖಲೆಗಳನ್ನು ಸಲ್ಲಿಸಿರುವ/ಆಧಾರ್ ಸಂಖ್ಯೆಯ ನೈಜತೆ ಖಾತ್ರಿಯಾಗದ ಅಭ್ಯರ್ಥಿಗಳು ಅಂತಿಮ ಆಯ್ಕೆಪಟ್ಟಿಯಲ್ಲಿ ತಮ್ಮ ಅವಕಾಶವನ್ನು ಕಳೆದುಕೊಳ್ಳುತ್ತಾರೆ.

***15]*** **ಹೆಚ್ಚುವರಿ ಪಟ್ಟಿ:**

ಅ. ಆಯ್ಕೆ ಪ್ರಾಧಿಕಾರವು ನೇಮಕಾತಿ ಅಧಿಸೂಚನೆಯಲ್ಲಿ ಪ್ರಕಟಿಸಿದ ಹುದ್ದೆಗಳ ಸಂಖ್ಯೆಯ ಶೇಕಡ 10 ನ್ನು ಮೀರದಂತೆ ಮುಖ್ಯಪಟ್ಟಿಯಲ್ಲಿಲ್ಲದ ಅಭ್ಯರ್ಥಿಗಳ ಹೆಚ್ಚುವರಿ ಪಟ್ಟಿಯನ್ನು ಸಿದ್ಧಪಡಿಸಲಾಗುವುದು. ಸದರಿ ಪಟ್ಟಿಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಲಾಗುವುದು ಮತ್ತು ಈ ಪಟ್ಟಿಯು ಅದೇ ಹುದ್ದೆಗೆ ಮುಂದಿನ ನೇಮಕಾತಿ ಅಧಿಸೂಚನೆ ಹೊರಡಿಸುವವರೆಗೆ ಅಥವಾ 6 ತಿಂಗಳ ಅವಧಿ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಚಾಲ್ತಿಯಲ್ಲಿರುತ್ತದೆ.

ಆ. ಒಂದು ವೇಳೆ ಮುಖ್ಯಪಟ್ಟಿಯಲ್ಲಿರುವ ಯಾವುದಾದರು ಅಭ್ಯರ್ಥಿಗಳು ನೇಮಕಾತಿಯನ್ನು ಕಡೆಗಣಿಸಿದಲ್ಲಿ ಅಥವಾ ನೇಮಕಾತಿಗೆ ಅನರ್ಹರೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಬದಲಿಗೆ ಅದೇ ಪ್ರವರ್ಗದಲ್ಲಿ, ನೇಮಕಾತಿಗೆ ಅಧಿಸೂಚಿಸಿದ ಹುದ್ದೆಗಳನ್ನು ಮೀರದಂತೆ, ಹೆಚ್ಚುವರಿ ಪಟ್ಟಿಯಲ್ಲಿರುವ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

***16] ಸ್ಪರ್ಧಾತ್ಮಕ ಪರೀಕ್ಷೆಯ ವಿವರಗಳು:***

ಪರೀಕ್ಷೆ ನಡೆಸುವ ದಿನಾಂಕ: **04-11-2017 ಮತ್ತು 05-11-2017.**

***ಪರೀಕ್ಷಾ ಅವಧಿ ಹಾಗೂ ಸಮಯ:***

| | |
|---|---|
| **ದಿ: 04-11-2017** | ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.00 ಗಂಟೆ (*ಪೇಪರ್*-1)<br>(ಬಹು ಆಯ್ಕೆ ಪ್ರಶ್ನೆಗಳು) |
| **ದಿ:04-11-2017** | ಮಧ್ಯಾಹ್ನ 2.30 ರಿಂದ 05.30 ಗಂಟೆ (*ಪೇಪರ್*-2)<br>ಆಂಗ್ಲ ಭಾಷಾ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(02.30 ರಿಂದ 03.30 ರವರೆಗೆ ಬಹು ಆಯ್ಕೆ ಪರೀಕ್ಷೆ<br>03.30 ರಿಂದ 05.30 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ:05-11-2017** | ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 01.00 ರವರೆಗೆ. (*ಪೇಪರ್*-2)<br>ಗಣಿತ ಮತ್ತು ವಿಜ್ಞಾನ / ಸಮಾಜ ಪಾಠಗಳು ಶಿಕ್ಷಕರ ಹುದ್ದೆಗೆ ಅರ್ಜಿಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(10.00 ರಿಂದ 11.00 ರವರೆಗೆ ಬಹು ಆಯ್ಕೆ ಪರೀಕ್ಷೆ,<br>11.00 ರಿಂದ 01.00 ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿ: 05-11-2017** | ಮಧ್ಯಾಹ್ನ 2.30 ರಿಂದ 04.30 ಗಂಟೆ. (*ಪೇಪರ್*-3) (ವಿವರಣಾತ್ಮಕ ಪರೀಕ್ಷೆ)<br>ಅರ್ಜಿ ಸಲ್ಲಿಸಿದ ಹುದ್ದೆಯ ಮಾಧ್ಯಮದ ಭಾಷಾ ಸಾಮರ್ಥ್ಯ ಪರೀಕ್ಷೆ |

**ಸೂಚನೆ**: ಪದವೀಧರ ಪ್ರಾಥಮಿಕ ಶಿಕ್ಷಕ (6ರಿಂದ 8ನೇ ತರಗತಿ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವವರು ಪೇಪರ್-1 ಮತ್ತು ಪೇಪರ್-2 ಎರಡಕ್ಕೂ ಕಡ್ಡಾಯವಾಗಿ ಹಾಜರಾಗಬೇಕು. ಪೇಪರ್-2 ರಲ್ಲಿ ಕಡ್ಡಾಯವಾಗಿ ಕನಿಷ್ಟ ಶೇ 50 ಅಂಕಗಳನ್ನು ಗಳಿಸಬೇಕು.

ಪೇಪರ್-3 ಕ್ಕೆ ಆಂಗ್ಲ ಭಾಷಾ ಹುದ್ದೆಯ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಅಭ್ಯರ್ಥಿಗಳು ಕಡ್ಡಾಯವಾಗಿ ಹಾಜರಾಗಬೇಕು. ಹಾಗೂ ಕನಿಷ್ಟ ಶೇ 60 ಅಂಕಗಳನ್ನು ಗಳಿಸಬೇಕು.

ಈ ಎಲ್ಲಾ ಪೇಪರ್‌ಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್‌ಗೆ ಪರಿಗಣಿಸಲಾಗುವುದು.

***17] ಪ್ರಶ್ನೆ ಪತ್ರಿಕೆಯಲ್ಲಿನ ವಿಷಯ ಹಾಗೂ ಅಂಕಗಳು :***

ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಪತ್ರಿಕೆಗೆ ಕೋಷ್ಠಕದಲ್ಲಿ ಸೂಚಿಸಿರುವಂತೆ ಅಂಕಗಳನ್ನು ನಿಗದಿಪಡಿಸಲಾಗಿದೆ.

***ವಿಷಯ ಮತ್ತು ನಿಗದಿಪಡಿಸಿರುವ ಗರಿಷ್ಠ ಅಂಕಗಳ ವಿಂಗಡಣೆ ಕೆಳಗಿನಂತಿದೆ***

***ಪೇಪರ್-1***

***ಬಹು ಆಯ್ಕೆಯ ಪ್ರಶ್ನೆಗಳು (ಒಎಂಆರ್ ಶೀಟ್‌ನಲ್ಲಿ ಉತ್ತರಿಸಬೇಕಾದ ಪರೀಕ್ಷೆ)***

| ಕ್ರ.ಸಂ | ವಿಷಯ | ಅಂಕಗಳು |
|---|---|---|
| 01 | ಸಾಮಾನ್ಯ ಕನ್ನಡ ಭಾಷೆ | 25 |
| 02 | ಸಾಮಾನ್ಯ ಆಂಗ್ಲ ಭಾಷೆ | 25 |
| 03 | ಸಾಮಾನ್ಯ ಜ್ಞಾನ (ಪ್ರಚಲಿತ ವಿದ್ಯಮಾನಗಳು) | 25 |
| 04 | ಶೈಕ್ಷಣಿಕ ಮನೋವಿಜ್ಞಾನ ಮತ್ತು ವಿಕಸನ + ಬೋಧನಾ ವಿಧಾನ | 50 |
| 05 | ಮೌಲ್ಯಶಿಕ್ಷಣ ಮತ್ತು ಆರೋಗ್ಯ ಶಿಕ್ಷಣ | 15 |
| 06 | ಗಣಕ ಯಂತ್ರ ಪ್ರಬುದ್ಧತೆ ಬಗ್ಗೆ | 10 |
| | ಒಟ್ಟು | 150 |

**ವಿಷಯ ಮತ್ತು ನಿಗದಿಪಡಿಸಿರುವ ಗರಿಷ್ಠ ಅಂಕಗಳ ವಿಂಗಡಣೆ ಪೇಪರ್-2**

| ಭಾಷೆ-ಆಂಗ್ಲ, ಗಣಿತ & ವಿಜ್ಞಾನ ಹಾಗು ಸಮಾಜ ಪಾಠಗಳು ಶಿಕ್ಷಕರಿಗೆ ಮಾತ್ರ | | |
|---|---|---|
| ಕ್ರ.ಸಂ | ವಿಷಯ | ಅಂಕಗಳು |
| 01 | ಆಯಾ ವಿಷಯದ ಜ್ಞಾನ - ಬಹು ಆಯ್ಕೆಯ ಪ್ರಶ್ನೆಗಳು (ಓಎಂಆರ್‌ಶೀಟ್‌ನಲ್ಲಿ ಉತ್ತರಿಸಬೇಕು) | 50 |
| 02 | ಆಯಾ ವಿಷಯದ ಜ್ಞಾನ – ವಿವರಣಾತ್ಮಕ ಉತ್ತರ ಬರೆಯಬೇಕಾದ ಪ್ರಶ್ನೆಗಳು | 100 |
| | ಒಟ್ಟು | 150 |

ಪೇಪರ್-2 ಪತ್ರಿಕೆಯಲ್ಲಿ ಕನಿಷ್ಟ ಶೇ.50 ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿದೆ.

**ಭಾಷಾ ಸಾಮರ್ಥ್ಯ ಪರೀಕ್ಷೆ – ಪೇಪರ್-3**

**ಗಣಿತ ಮತ್ತು ವಿಜ್ಞಾನ ಹಾಗು ಸಮಾಜಪಾಠಗಳು ಅಭ್ಯರ್ಥಿಗಳಿಗೆ ಮಾತ್ರ**

| ಕ್ರ.ಸಂ | ವಿಷಯ | ಅಂಕಗಳು |
|---|---|---|
| 01 | ಆಯಾ ಬೋಧನಾ ಮಾಧ್ಯಮದ ಭಾಷಾ ಸಾಮರ್ಥ್ಯ – ವಿವರಣಾತ್ಮಕ ಪರೀಕ್ಷೆ<br>ಅಭ್ಯರ್ಥಿಗಳು ನಿರ್ದಿಷ್ಟಪಡಿಸಿದ ಬೋಧನಾ ಮಾಧ್ಯಮದಲ್ಲಿ ಬೋಧಿಸಲು ಹೊಂದಿರುವ ಭಾಷಾ ಬಳಕೆಯ ಸಾಮರ್ಥ್ಯ, ಗ್ರಹಿಸುವಿಕೆ, ಶಬ್ದಭಂಡಾರ ಮತ್ತು ಬರವಣಿಗೆ ಸಾಮರ್ಥ್ಯಗಳನ್ನು ಪರೀಕ್ಷಿಸಲಾಗುವುದು. | 100 |
| | ಒಟ್ಟು | 100 |

ಪೇಪರ್-3 ಪತ್ರಿಕೆಯಲ್ಲಿ ಕನಿಷ್ಟ ಶೇ. 60 ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿದೆ.

**ಸೂಚನೆ**: ಅಭ್ಯರ್ಥಿಗಳು ಮೇಲೆ ನಿಗದಿಪಡಿಸಿದ ಕನಿಷ್ಟ ಅಂಕಗಳನ್ನು ಗಳಿಸದೇ ಇದ್ದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ಎಲ್ಲ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್ ನಿರ್ಧರಿಸಲು ಪರಿಗಣಿಸಲಾಗುವುದು. ಅಂದರೆ, ಭಾಷೆ-ಆಂಗ್ಲ ವಿಷಯದ ಹುದ್ದೆಗೆ ಪೇಪರ್-1 ಮತ್ತು ಪೇಪರ್-2 ರಲ್ಲಿ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದು. ಗಣಿತ ಮತ್ತು ವಿಜ್ಞಾನ ಹಾಗು ಸಮಾಜಪಾಠಗಳು ವಿಷಯಗಳ ಹುದ್ದೆಗಳಿಗೆ ಪೇಪರ್-1, ಪೇಪರ್-2 ಮತ್ತು ಪೇಪರ್-3 ರಲ್ಲಿ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದು. ಪೇಪರ್-3 ರ ಪತ್ರಿಕೆಯು ಭಾಷಾಶಿಕ್ಷಕರು-ಆಂಗ್ಲ ಇವರಿಗೆ ಅನ್ವಯಿಸುವುದಿಲ್ಲ.

***18] ಪರೀಕ್ಷಾ ವಿಷಯಗಳಿಗೆ ನಿಗದಿಪಡಿಸಿರುವ ಪಠ್ಯವಸ್ತು:***

ಪ್ರಶ್ನೆಗಳ ವ್ಯಾಪ್ತಿ ಹಾಗೂ ಸ್ವರೂಪ.

*ಅ.* ಪ್ರಶ್ನೆಗಳು ನಿಗದಿಪಡಿಸಲಾಗಿರುವ ಪಠ್ಯವಸ್ತುವಿನ(ಸಿಲಬಸ್) ವ್ಯಾಪ್ತಿಯಲ್ಲಿ ಬರುತ್ತದೆ. (ವಿವರವಾದ ಪಠ್ಯವಸ್ತು ಅನುಬಂಧ–2 ರಲ್ಲಿ ನೀಡಲಾಗಿದೆ. ಇಲಾಖಾ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಿದೆ.)

*ಆ.* ಪೇಪರ್–1 ರ ಪ್ರಶ್ನೆಪತ್ರಿಕೆಯ ಪ್ರಶ್ನೆಗಳು ವಸ್ತುನಿಷ್ಠವಾಗಿದ್ದು (objective type) ಪ್ರತಿ ಪ್ರಶ್ನೆಗೆ ಒಂದು ಅಂಕ ನಿಗದಿಪಡಿಸಿದೆ. ಪ್ರತಿ ಪ್ರಶ್ನೆಯು ನಾಲ್ಕು ಉತ್ತರಗಳನ್ನು ಹೊಂದಿದ್ದು, ಇವುಗಳಲ್ಲಿ ಒಂದು ಸರಿ ಉತ್ತರವಾಗಿರುತ್ತದೆ. ಉತ್ತರಗಳನ್ನು 'ಓ.ಎಂ.ಆರ್' ಶೀಟಿನಲ್ಲಿ ಗುರುತಿಸುವುದು.

*ಇ.* **<u>ಪೇಪರ್ –1 ಮತ್ತು ಪೇಪರ್–2 ರ ಪ್ರಶ್ನೆಗಳು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ಇರುತ್ತವೆ.</u>**

*ಈ.* ಪೇಪರ್–2 ರ ಪ್ರಶ್ನೆಪತ್ರಿಕೆಯಲ್ಲಿ ಎರಡು ಭಾಗಗಳಿದ್ದು ಮೊದಲಭಾಗದಲ್ಲಿ ಬಹು ಆಯ್ಕೆಯ ಪ್ರಶ್ನೆಗಳಿಗೆ ಉತ್ತರಗಳನ್ನು 'ಓ.ಎಂ.ಆರ್' ಶೀಟಿನಲ್ಲಿ ಗುರುತಿಸುವುದು. ಹಾಗೂ ಎರಡನೇ ಭಾಗದಲ್ಲಿ ವಿವರಣಾತ್ಮಕ ಉತ್ತರವನ್ನು, ಪರೀಕ್ಷಾ ಕೇಂದ್ರದಲ್ಲಿ ನೀಡುವ ಉತ್ತರಪತ್ರಿಕೆಯಲ್ಲಿ ಬರೆಯಬೇಕಾಗುತ್ತದೆ.
ಪೇಪರ್–2 ರ ಪ್ರಶ್ನೆ ಪತ್ರಿಕೆಗೆ ಉತ್ತರಗಳನ್ನು **ಅಭ್ಯರ್ಥಿಯು ಆಯ್ಕೆ ಬಯಸುವ ಹುದ್ದೆಯ ಬೋಧನಾ ಮಾಧ್ಯಮದಲ್ಲಿ ಅಥವಾ ಆಂಗ್ಲ ಭಾಷೆಯಲ್ಲಿ** ಉತ್ತರಿಸಬೇಕು.

*ಉ.* ಪೇಪರ್–3 ರ ಪ್ರಶ್ನೆ ಪತ್ರಿಕೆ ವಿವರಣಾತ್ಮಕ ಮಾದರಿಯಾಗಿದ್ದು, ಅಭ್ಯರ್ಥಿಯು ಆಯ್ಕೆ ಬಯಸುವ ವಿಷಯದ ಹುದ್ದೆಯ, ಬೋಧನಾ ಮಾಧ್ಯಮದ ಭಾಷೆಯಲ್ಲಿಯೇ ಉತ್ತರಿಸಬೇಕು.

***19] ಪ್ರಮುಖವಾದ ಸೂಚನೆಗಳು:***

1. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಮಾತ್ರ ಅರ್ಜಿಗಳನ್ನು ಸಲ್ಲಿಸಬೇಕು. ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಸಹಾ ಆನ್‌ಲೈನ್ ಮೂಲಕವೇ ಪಡೆಯತಕ್ಕದ್ದು. ಅಭ್ಯರ್ಥಿಯು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಹಾಜರಾದ ಮಾತ್ರಕ್ಕೆ ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ. ಅಭ್ಯರ್ಥಿಯು ಇದರ ಜೊತೆಗೆ ಆಯಾ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ವಯೋಮಿತಿ ಹೊಂದಿರತಕ್ಕದ್ದು.
2. ಅರ್ಜಿಗಳನ್ನು ದಿನಾಂಕ: 25–9–2017 ರೊಳಗೆ ಆನ್‌ಲೈನ್ ಮೂಲಕವೇ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3. ಅಭ್ಯರ್ಥಿಗಳು ***ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.***
4. ಪ್ರಮಾಣ ಪತ್ರಗಳ ಪರಿಶೀಲನೆಯ ಸಮಯದಲ್ಲಿ ***<u>ಸುಳ್ಳು ದಾಖಲೆ ಅಥವಾ ಸುಳ್ಳು ಮಾಹಿತಿ ನೀಡಿರುವುದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಯಾಗುವ ಅವಕಾಶವನ್ನು ಕಳೆದುಕೊಳ್ಳುತ್ತಾರೆ.</u>***
5. ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾದ ಮಾತ್ರಕ್ಕೆ ಅಭ್ಯರ್ಥಿಗಳು ನೇಮಕಾತಿಗೆ ಹಕ್ಕನ್ನು ಪಡೆದುಕೊಳ್ಳುವುದಿಲ್ಲ.
6. ಮೇಲಿನ ನೇಮಕಾತಿಗಳು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ನಿಯಮಗಳು, ಆದೇಶಗಳು ಮತ್ತು ತಿದ್ದುಪಡಿಗೆ ಒಳಪಟ್ಟಿರುತ್ತದೆ.
7. ಯಾವುದೇ ಹಂತದಲ್ಲಿ ತಪ್ಪು ಮಾಹಿತಿಯ ಆಧಾರದ ಮೇಲೆ ಆಯ್ಕೆಯಾದ ಅಥವಾ ಅನರ್ಹತೆಯ ಕಾರಣಗಳಿಗಾಗಿ ಅಭ್ಯರ್ಥಿಯ ಹೆಸರನ್ನು ಪಟ್ಟಿಯಿಂದ ಕೈಬಿಡುವ ಅಥವಾ ನೇಮಕಾತಿ ಆದೇಶವನ್ನು ರದ್ದುಗೊಳಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿರುತ್ತದೆ.
8. ಅಭ್ಯರ್ಥಿಗಳು ಅವರ ಅರ್ಜಿಗಳಲ್ಲಿ ಭರ್ತಿ ಮಾಡಿರುವ ಮಾಹಿತಿಗಳ ಆಧಾರದ ಮೇಲೆ ಅವರಿಗೆ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಪ್ರವೇಶ ಪತ್ರಗಳನ್ನು ನೀಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಅಂಕಗಳ ಮಾಹಿತಿ, ಮೀಸಲಾತಿ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ ಸಂದರ್ಭಗಳಲ್ಲಿ ಮುಂದಿನ ಆಗುಹೋಗುಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.

*9.* ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿಗಳಿಗೆ ಸಲ್ಲಿಸಿರುವ ಸಂಬಂಧಿತ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು.

*10.* ಅಭ್ಯರ್ಥಿಗಳು ಸಲ್ಲಿಸಿದ ಆನ್‌ಲೈನ್ ಅರ್ಜಿಯ ಪ್ರತಿ, ಪ್ರವೇಶ ಪತ್ರ, ಶುಲ್ಕ ಪಾವತಿಸಿದ ಚಲನ್‌ಪ್ರತಿ ಹಾಗೂ ಇತರೆ ದಾಖಲೆಗಳನ್ನು ಆಯ್ಕೆ ಪ್ರಕ್ರಿಯೆ ಮುಗಿಯುವ ತನಕ ಸುರಕ್ಷಿತವಾಗಿ ಇಟ್ಟುಕೊಳ್ಳತಕ್ಕದ್ದು.

*11.* ದುರ್ನಡತೆ: ಒಬ್ಬ ಅಭ್ಯರ್ಥಿಯು ನಕಲು ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತನೆ ಎಸಗಿದ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ಆಯ್ಕೆ ಪ್ರಾಧಿಕಾರದಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದೇ ಅಲ್ಲದೇ, ಆಯ್ಕೆ ಪ್ರಾಧಿಕಾರವು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಅನರ್ಹರಾಗುತ್ತಾನೆ.

*12.* ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ಅಭ್ಯರ್ಥಿಗಳು ಆಕ್ಷೇಪಣೆ ಸಲ್ಲಿಸುವಾಗ ಮೂಲ ಅರ್ಜಿಯಲ್ಲಿ ದಾಖಲಿಸಿದ ವಿಷಯಗಳಿಗೆ ಸಂಬಂಧಿಸಿದಂತೆ ಮಾತ್ರ ಆಕ್ಷೇಪಣೆ ಸಲ್ಲಿಸಬಹುದು. ನಮೂದಿಸಲು ಬಿಟ್ಟುಹೋಗಿದ್ದ ಯಾವುದೇ ಮಾಹಿತಿಯನ್ನು ಹೊಸದಾಗಿ ದಾಖಲಿಸಲು ಅವಕಾಶವಿರುವುದಿಲ್ಲ. ಅಂತಹ ಆಕ್ಷೇಪಣೆ ಮತ್ತು ಲಗತ್ತುಗಳನ್ನು ಪರಿಗಣಿಸಲಾಗುವುದಿಲ್ಲ.

*13.* ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ತಮ್ಮ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ, ಸಹಿಯನ್ನು, ಹಾಗು ಎಡಗೈ ಹೆಬ್ಬೆಟ್ಟಿನ ಗುರುತನ್ನು ನಿಗದಿತ ಸ್ಥಳಗಳಲ್ಲಿ ಸ್ಕ್ಯಾನ್ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್‌ಲೋಡ್ ಮಾಡಬೇಕು.

*14.* ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್‌ನ ಸಂಖ್ಯೆಯನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ. ಒಂದು ವೇಳೆ ಆಧಾರ್ ಕಾರ್ಡ್ ಹೊಂದಿಲ್ಲದಿದ್ದಲ್ಲಿ, ನೊಂದಣಿ ಮಾಡಿಸಿಕೊಂಡು ಇಐಡಿ(EID)ಯ, ಅಂದರೆ 28 ಅಂಕಿಗಳ ಸಂಖ್ಯೆಯನ್ನು ನಮೂದಿಸಬೇಕು. ಅಂತಿಮ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ, ಆಧಾರ್ ನೋಂದಣಿಯ ನೈಜತೆಯನ್ನು ಪರಿಶೀಲಿಸಿ, ಅಭ್ಯರ್ಥಿಯ ಗುರುತಿಸುವಿಕೆಯನ್ನು ಖಾತರಿಪಡಿಸಿಕೊಳ್ಳಲಾಗುವುದು.

*15.* ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಈ ಸಂಬಂಧ ಆಯ್ಕೆ ಪ್ರಾಧಿಕಾರಿ/ನೇಮಕಾತಿ ಪ್ರಾಧಿಕಾರಿಗಳು ಕಾಲಕಾಲಕ್ಕೆ ನೀಡುವ ಸೂಚನೆಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ [http://schooleducation.kar.nic.in] ನಲ್ಲಿ ಅವಲೋಕಿಸುವುದು.

ಹೆಚ್ಚಿನ ವಿವರಗಳಿಗೆ ಇಲಾಖೆಯ ವೆಬ್‌ಸೈಟ್ **http://schooleducation.kar.nic.in** ರಲ್ಲಿ ನೀಡಿರುವ ಸೂಚನೆಗಳನ್ನು ಗಮನಿಸಬೇಕು. ಹಾಗೂ ಯಾವುದೇ ಹೆಚ್ಚಿನ ಸ್ಪಷ್ಟೀಕರಣಕ್ಕೆ ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾ ಉಪನಿರ್ದೇಶಕರು [ಆಡಳಿತ], ಇವರ ಕಛೇರಿಯನ್ನು ಸಂಪರ್ಕಿಸಬಹುದು.

**ನಾಯಕ ರಾಜೀವ ವೆಂಕಟರಮಣ**
**ಆಯ್ಕೆ ಹಾಗೂ ನೇಮಕಾತಿ ಪ್ರಾಧಿಕಾರ ಮತ್ತು**
**ಜಿಲ್ಲಾ ಉಪನಿರ್ದೇಶಕರು [ಆಡಳಿತ],**
**ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ.**

## ಅನುಬಂಧ–1

### 2017–18 ನೇ ಸಾಲಿನ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಖಾಲಿ ಇರುವ ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8ನೇ ತರಗತಿ) ನೇಮಕಾತಿಗೆ ಹುದ್ದೆಗಳ ವರ್ಗೀಕರಣ.

**ವಿಷಯ: ಭಾಷೆ– ಆಂಗ್ಲ**

| ಬ್ಯಾಕ್ ಲಾಗ್ ಹುದ್ದೆಗಳು | ಪ್ರಕಟಿಸಿದ ಖಾಲಿ ಹುದ್ದೆಗಳು | ಒಟ್ಟು ಹುದ್ದೆಗಳು | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|---|---|---|
| | | | | ಪ.ಜಾತಿ | ಪ.ಪಂ | ಪ್ರ–1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
| | 321 | 321 | ಇತರೆ | 25 | 5 | 7 | 25 | 7 | 7 | 8 | 80 | 164 |
| | | | ಗ್ರಾಮೀಣ | 12 | 3 | 4 | 12 | 4 | 4 | 5 | 40 | 84 |
| | | | ಅಂ.ವಿ | 3 | 1 | 1 | 3 | 1 | 1 | 1 | 8 | 19 |
| | | | ಮಾ.ಸೈ | 4 | 1 | 1 | 4 | 1 | 1 | 1 | 16 | 29 |
| | | | ಕ.ಮಾ.ಅ | 2 | | | 2 | | | 1 | 8 | 13 |
| | | | ಯೋ.ಅ | 2 | | | 2 | | | | 8 | 12 |
| | | | ಒಟ್ಟು | 48 | 10 | 13 | 48 | 13 | 13 | 16 | 160 | 321 |
| ಒಟ್ಟು ಶೇ 100 ರ ಸೈಕಲ್ ನಂತೆ | | | ಆರಂಭಿಕ ಬಿಂದು 01–ಅಂತಿಮ ಬಿಂದು 321 | | | | | | | | | |
| ಪ್ರಾರಂಭಿಕ ಬಿಂದು [20 ಸೈಕಲ್ ನಂತೆ] | | | | 1 | 1 | 1 | 1 | 1 | 1 | 1 | 1 | |
| ಅಂತಿಮ ಬಿಂದು [20 ಸೈಕಲ್ ನಂತೆ] | | | | 48 | 10 | 13 | 48 | 13 | 13 | 16 | 160 | |

ಸೂಚನೆ; ಅಂಗವಿಕಲ ಮೀಸಲಾತಿ:–ಪ.ಜಾತಿ–02, ಪ.ಪಂಗಡ–01, ಪ್ರವರ್ಗ–1–01, ಪ್ರವರ್ಗ–2ಎ–02, ಪ್ರವರ್ಗ–2ಬಿ–01, ಪ್ರವರ್ಗ–3ಎ–01, ಪ್ರವರ್ಗ–3ಬಿ–01, ಸಾಮಾನ್ಯ ವರ್ಗ–04 ಹುದ್ದೆಗಳನ್ನು ದೃಷ್ಟಿ ಮಾಂದ್ಯ ಅಭ್ಯರ್ಥಿಗಳಿಗೆ ಮತ್ತು ಪ.ಜಾತಿ–01, ಪ್ರವರ್ಗ–2ಎ–01, ಸಾಮಾನ್ಯ–02 ಹುದ್ದೆಗಳನ್ನು ಶ್ರವಣ ದೋಷ ಅಭ್ಯರ್ಥಿಗಳಿಗೆ, ಸಾಮಾನ್ಯ–01 ಹುದ್ದೆಯನ್ನು ಚಲನವಲನ ವೈಕಲ್ಯ ಹೊಂದಿರುವ ಅಭ್ಯರ್ಥಿಗೆ ಹಾಗೂ ಸಾಮಾನ್ಯ–01 ಹುದ್ದೆಯನ್ನು ಕುಷ್ಟರೋಗ ನಿವಾರಣೆ ಹೊಂದಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದೆ.

### 2017–18 ನೇ ಸಾಲಿನ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಖಾಲಿ ಇರುವ ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8ನೇ ತರಗತಿ) ನೇಮಕಾತಿಗೆ ಹುದ್ದೆಗಳ ವರ್ಗೀಕರಣ.

**ವಿಷಯ: ಗಣಿತ ಮತ್ತು ವಿಜ್ಞಾನ(ಕನ್ನಡ ಮಾಧ್ಯಮ)**

| ಬ್ಯಾಕ್ ಲಾಗ್ ಹುದ್ದೆಗಳು | ಪ್ರಕಟಿಸಿದ ಖಾಲಿ ಹುದ್ದೆಗಳು | ಒಟ್ಟು ಹುದ್ದೆಗಳು | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|---|---|---|
| | | | | ಪ.ಜಾತಿ | ಪ.ಪಂ | ಪ್ರ–1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
| | 293 | 293 | ಇತರೆ | 23 | 5 | 7 | 22 | 7 | 6 | 7 | 73 | 150 |
| | | | ಗ್ರಾಮೀಣ | 11 | 03 | 03 | 11 | 03 | 03 | 04 | 37 | 75 |
| | | | ಅಂ.ವಿ | 03 | 01 | 01 | 03 | 01 | 01 | 01 | 08 | 19 |
| | | | ಮಾ.ಸೈ | 04 | | 01 | 04 | 01 | 01 | 01 | 14 | 26 |
| | | | ಕ.ಮಾ.ಅ | 02 | | | 02 | | | 01 | 07 | 12 |
| | | | ಯೋ.ಅ | 02 | | | 02 | | | | 07 | 11 |
| | | | ಒಟ್ಟು | 45 | 09 | 12 | 44 | 12 | 11 | 14 | 146 | 293 |
| ಒಟ್ಟು ಶೇ 100 ರ ಸೈಕಲ್ ನಂತೆ | | | ಆರಂಭಿಕ ಬಿಂದು 01– ಅಂತಿಮ ಬಿಂದು 293 | | | | | | | | | |
| ಪ್ರಾರಂಭಿಕ ಬಿಂದು [20 ಸೈಕಲ್ನಂತೆ] | | | | 01 | 01 | 01 | 01 | 01 | 01 | 01 | 01 | |
| ಅಂತಿಮ ಬಿಂದು [20 ಸೈಕಲ್ನಂತೆ] | | | | 45 | 09 | 12 | 44 | 12 | 11 | 14 | 146 | |

ಸೂಚನೆ; ಅಂಗವಿಕಲ ಮೀಸಲಾತಿ:– ಪ.ಜಾತಿ–02 ಹುದ್ದೆಗಳನ್ನು ಚಲನವಲನ ವೈಕಲ್ಯ ಅಭ್ಯರ್ಥಿಗೆ, 01 ಹುದ್ದೆಯನ್ನು ಕುಷ್ಟರೋಗ ನಿವಾರಣೆ ಹೊಂದಿದ ಅಭ್ಯರ್ಥಿಗೆ; ಪ.ಪಂಗಡ–01, ಪ್ರವರ್ಗ–1–01, ಪ್ರವರ್ಗ–2ಎ–02, ಪ್ರವರ್ಗ–2ಬಿ–01, ಪ್ರವರ್ಗ–3ಎ–01, ಪ್ರವರ್ಗ–3ಬಿ–01 ಹುದ್ದೆಗಳನ್ನು ಚಲನವಲನ ವೈಕಲ್ಯ ಅಭ್ಯರ್ಥಿಗಳಿಗೆ; ಪ್ರವರ್ಗ–2ಎ–01 ಹುದ್ದೆಯನ್ನು ಕುಷ್ಟರೋಗ ನಿವಾರಣೆ ಹೊಂದಿದ ಅಭ್ಯರ್ಥಿಗೆ; ಮತ್ತು ಸಾಮಾನ್ಯ ವರ್ಗದ 08 ಹುದ್ದೆಗಳಲ್ಲಿ 05 ಹುದ್ದೆಗಳನ್ನು ಚಲನವಲನ ವೈಕಲ್ಯ ಹೊಂದಿರುವ ಅಭ್ಯರ್ಥಿಗಳಿಗೆ 03 ಹುದ್ದೆಗಳನ್ನು ಕುಷ್ಟರೋಗ ನಿವಾರಣಾ ಹೊಂದಿದ ಅಭ್ಯರ್ಥಿಗೆ ಮೀಸಲಿರಿಸಿದೆ.

**2017–18 ನೇ ಸಾಲಿನ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಖಾಲಿ ಇರುವ ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8ನೇ ತರಗತಿ) ನೇಮಕಾತಿಗೆ ಹುದ್ದೆಗಳ ವರ್ಗೀಕರಣ.**

**ವಿಷಯ: ಗಣಿತ ಮತ್ತು ವಿಜ್ಞಾನ(ಉರ್ದು ಮಾಧ್ಯಮ)**

| ಬ್ಯಾಕ್ ಲಾಗ್ ಹುದ್ದೆಗಳು | ಪ್ರಕಟಿಸಿದ ಖಾಲಿ ಹುದ್ದೆಗಳು | ಒಟ್ಟು ಹುದ್ದೆಗಳು | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|---|---|---|
| | | | | ಪ.ಜಾತಿ | ಪ.ಪಂ | ಪ್ರ–1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
| | 18 | 18 | ಇತರೆ | 2 | 1 | 1 | 2 | 1 | 1 | | 5 | 13 |
| | | | ಗ್ರಾಮೀಣ | 1 | | | | | | | 3 | 4 |
| | | | ಅಂ.ವಿ | | | | | | | | 1 | 1 |
| | | | ಮಾ.ಸೈ | | | | | | | | | |
| | | | ಕ.ಮಾ.ಅ | | | | | | | | | |
| | | | ಯೋ.ಅ | | | | | | | | | |
| | | | ಒಟ್ಟು | 3 | 1 | 1 | 2 | 1 | 1 | | 9 | 18 |
| ಒಟ್ಟು ಶೇ 100 ರ ಸೈಕಲ್‌ನಂತೆ | | | ಆರಂಭಿಕ ಬಿಂದು 01– ಅಂತಿಮ ಬಿಂದು 18 | | | | | | | | | |
| ಪ್ರಾರಂಭಿಕ ಬಿಂದು [20 ಸೈಕಲ್‌ನಂತೆ] | | | | 01 | 01 | 01 | 01 | 01 | 01 | | 01 | |
| ಅಂತಿಮ ಬಿಂದು [20 ಸೈಕಲ್‌ನಂತೆ] | | | | 3 | 1 | 1 | 2 | 1 | 1 | | 9 | |

ಸೂಚನೆ; ಅಂಗವಿಕಲ ಮೀಸಲಾತಿ:–ಸಾಮಾನ್ಯ ವರ್ಗದ 01 ಅಂಗವಿಕಲ ಹುದ್ದೆಯನ್ನು ಚಲನ ವಲನ ವೈಕಲ್ಯ ಹೊಂದಿದ ಅಭ್ಯರ್ಥಿಗೆ ಮೀಸಲಿರಿಸಿದೆ.

**2017–18 ನೇ ಸಾಲಿನ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಖಾಲಿ ಇರುವ ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8ನೇ ತರಗತಿ) ನೇಮಕಾತಿಗೆ ಹುದ್ದೆಗಳ ವರ್ಗೀಕರಣ.**

**ವಿಷಯ: ಸಮಾಜ ಪಾಠಗಳು (ಕನ್ನಡ ಮಾಧ್ಯಮ)**

| ಬ್ಯಾಕ್ ಲಾಗ್ ಹುದ್ದೆಗಳು | ಪ್ರಕಟಿಸಿದ ಖಾಲಿ ಹುದ್ದೆಗಳು | ಒಟ್ಟು ಹುದ್ದೆಗಳು | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|---|---|---|
| | | | | ಪ.ಜಾತಿ | ಪ.ಪಂ | ಪ್ರ–1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
| | 73 | 73 | ಇತರೆ | 6 | 2 | 2 | 6 | 2 | 2 | 2 | 18 | 40 |
| | | | ಗ್ರಾಮೀಣ | 3 | 1 | 1 | 3 | 1 | 1 | 1 | 10 | 21 |
| | | | ಅಂ.ವಿ | 1 | | | 1 | | | | 2 | 4 |
| | | | ಮಾ.ಸೈ | 1 | | | 1 | | | | 3 | 5 |
| | | | ಕ.ಮಾ.ಅ | | | | | | | | 2 | 2 |
| | | | ಯೋ.ಅ | | | | | | | | 1 | 1 |
| | | | ಒಟ್ಟು | 11 | 3 | 3 | 11 | 3 | 3 | 3 | 36 | 73 |
| ಒಟ್ಟು ಶೇ 100 ರ ಸೈಕಲ್‌ನಂತೆ | | | ಆರಂಭಿಕ ಬಿಂದು 01– ಅಂತಿಮ ಬಿಂದು 73 | | | | | | | | | |
| ಪ್ರಾರಂಭಿಕ ಬಿಂದು [20 ಸೈಕಲ್‌ನಂತೆ] | | | | 1 | 1 | 1 | 1 | 1 | 1 | 1 | 1 | |
| ಅಂತಿಮ ಬಿಂದು [20 ಸೈಕಲ್‌ನಂತೆ] | | | | 11 | 3 | 3 | 11 | 3 | 3 | 3 | 36 | |

ಸೂಚನೆ; ಅಂಗವಿಕಲ ಮೀಸಲಾತಿ:–ಪ.ಜಾತಿ–01, ಪ್ರವರ್ಗ–2ಎ–01, ಸಾಮಾನ್ಯ ವರ್ಗದ–02 ಹುದ್ದೆಗಳನ್ನು ದೃಷ್ಟಿ ಮಾಂದ್ಯ ಅಭ್ಯರ್ಥಿಗಳಿಗೆ ಮೀಸಲಿರಿಸಿದೆ.

**2017-18 ನೇ ಸಾಲಿನ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಖಾಲಿ ಇರುವ ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8ನೇ ತರಗತಿ) ನೇಮಕಾತಿಗೆ ಹುದ್ದೆಗಳ ವರ್ಗೀಕರಣ.**

**ವಿಷಯ: ಸಮಾಜ ಪಾಠಗಳು (ಉರ್ದು ಮಾಧ್ಯಮ)**

| ಬ್ಯಾಕ್ ಲಾಗ್ ಹುದ್ದೆಗಳು | ಪ್ರಕಟಿಸಿದ ಖಾಲಿ ಹುದ್ದೆಗಳು | ಒಟ್ಟು ಹುದ್ದೆಗಳು | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|---|---|---|
| | | | | ಪ.ಜಾತಿ | ಪ.ಪಂ | ಪ್ರ-1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
| | 24 | 24 | ಇತರೆ | 2 | 1 | 1 | 2 | 1 | 1 | 1 | 7 | **16** |
| | | | ಗ್ರಾಮೀಣ | 1 | | | 1 | | | | 3 | **5** |
| | | | ಅಂ.ವಿ | 1 | | | | | | | 1 | **2** |
| | | | ಮಾ.ಸೈ | | | | | | | | 1 | **1** |
| | | | ಕ.ಮಾ.ಅ | | | | | | | | | |
| | | | ಯೋ.ಅ | | | | | | | | | |
| | | | ಒಟ್ಟು | **4** | **1** | **1** | **3** | **1** | **1** | **1** | **12** | **24** |
| **ಒಟ್ಟು ಶೇ 100 ರ ಸೈಕಲ್‌ನಂತೆ** | | | **ಆರಂಭಿಕ ಬಿಂದು 01- ಅಂತಿಮ ಬಿಂದು 24** | | | | | | | | | |
| ಪ್ರಾರಂಭಿಕ ಬಿಂದು [20 ಸೈಕಲ್‌ನಂತೆ] | | | | **1** | **1** | **1** | **1** | **1** | **1** | **1** | **1** | |
| ಅಂತಿಮ ಬಿಂದು [20 ಸೈಕಲ್‌ನಂತೆ] | | | | **4** | **1** | **1** | **3** | **1** | **1** | **1** | **12** | |

ಸೂಚನೆ; ಅಂಗವಿಕಲ ಮೀಸಲಾತಿ:-ಪ.ಜಾತಿ-01, ಸಾಮಾನ್ಯ ವರ್ಗದ 01 ಅಂಗವಿಕಲ ಹುದ್ದೆಗಳನ್ನು ದೃಷ್ಟಿ ಮಾಂದ್ಯ ಅಭ್ಯರ್ಥಿಗೆ ಮೀಸಲಿರಿಸಿದೆ.

**ನಾಯಕ ರಾಜೀವ ವೆಂಕಟರಮಣ**
**ಆಯುಕ್ತ ಹಾಗೂ ನೇಮಕಾತಿ ಪ್ರಾಧಿಕಾರ ಮತ್ತು**
**ಜಿಲ್ಲಾ ಉಪನಿರ್ದೇಶಕರು [ಆಡಳಿತ],**
**ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ.**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 50